ಸಂಪಾದಕ:ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳಪತ್ರಿಕೆ www.pavitrapraja.com

# ಪವಿತ್ರ ಪ್ರಜಾ

PAVITRAPRAJA Daily RNI:KARKAN: 2007/22780 ದಿನಪತ್ರಿಕೆ

e-mail:pavitrapraja@gmail.com KA/SK/CTA-806/21-23 Davanagere 9141920642

ಸಂಪುಟ:18 ಸಂಚಿಕೆ: 201 ದಿನಾಂಕ:20–06–2024 ಗುರುವಾರ ಪುಟ:4 ರೂ.2–00 ಉಪಸಂಪಾದಕರು: ಸುಪ್ರಿತ ಎಸ್. ಒಡೆಯರ್ ಎಂಬಿಎ Vol:18 Issuse:201 Date:20-06-2024 Thuesday page:4 Rs:2-00 subEditor: Supritha Wadeyar

# ಹಲವೆಡೆ ಮಹಜರು ಪ್ರಮುಖ ಸಾಕ್ಷಿಗಳು ಜಪ್ತಿ



## ರೇಣುಕಾಸ್ವಾಮಿ ಹತ್ಯೆ

ಬೆಂಗಳೂರು:–

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ದರ್ಶನ್ ಪವಿತ್ರಾ ಗೌಡ ಸೇರಿ ಬಂಧಿತ ಆರೋಪಿಗಳನ್ನು ಕರೆದೊಯ್ದು ಅಪರಾಧ ನಡೆದ ಸ್ಥಳ ಹಾಗೂ ಇತರೆ ಸ್ಥಳಗಳಲ್ಲಿ ಪೊಲೀಸರು ಮಹಜರು ನಡೆಸಿದ್ದಾರೆ.

ಇನ್ನೂ ಕೆಲವು ಸ್ಥಳಗಳ ಮಹಜರು ಬಾಕಿ ಇದೆ ಎನ್ನಲಾಗಿದ್ದು, ಮಹಜರು ವೇಳೆ ನಟ ದರ್ಶನ್ ನಿಂದ ಪ್ರದೋಶ್ ಪಡೆದ 30 ಲಕ್ಷ ಹಣ ಗಿರಿನಗರದ ನಿವಾಸದಲ್ಲಿ ಪತ್ತೆಯಾಗಿದ್ದು, ಅದನ್ನು ಜಪ್ತಿ ಮಾಡಿ ಸಿಸಿಟಿವಿ ದೃಶ್ಯಗಳನ್ನು ಸಂಗ್ರಹಿಸಲಾಗಿದೆ.

ಆರೋಪಿಗಳಾದ ರಾಘವೇಂದ್ರ, ಕಾರ್ತಿಕ್, ನಿಖಿಲ್, ವಿನಯ್, ನಾಗರಾಜು, ಲಕ್ಷ್ಮಣ್, ಪ್ರದೂಶ್ ನನ್ನು ಕರೆದೊಯ್ದು ಶವ ಬೀಸಾಕಿದ್ದ ಸತ್ವ ಅನುಗ್ರಹ ಅಪಾರ್ಟ್ ಮೆಂಟ್ ಬಳಿ ಮಹಜರು ಮಾಡಲಾಗಿದೆ.

ಆರೋಪಿಗಳಾದ ಪವಿತ್ರ ಗೌಡ, ದರ್ಶನ್, ಪವನ್, ರಾಘವೇಂದ್ರ, ನಂದೀಶ್, ವಿನಯ್, ನಾಗರಾಜು, ಲಕ್ಷ್ಮಣ, ದೀಪಕ್, ಪ್ರದೋಶ್, ಕಾರ್ತೀಕ್, ನಿಖಿಲ್‌ನನ್ನು ಕರೆದೊಯ್ದು ಪಟ್ಟಣಗೆರೆ ಜಯಣ್ಣ ಫಾರಂ (ರೇಣುಕಾ ಸ್ವಾಮಿ ಕೊಲೆಯಾದ ಸ್ಥಳ) ನಲ್ಲಿ ಮಹಜರು ನಡೆಸಿ ಕೃತ್ಯಕ್ಕೆ ಬಳಸಿದ್ದ ಲಾಠಿ, ಮರದ ಪೀಸ್, ವಾಟರ್ ಬಾಟಲ್, ಸೆಕ್ಯೂರಿಟಿ ರೂಮ್ ನಲ್ಲಿ ದೊರೆತ ರಕ್ತದ ಕಲೆಗಳಿದ್ದ ಬಟ್ಟೆ ಜಪ್ತಿ ಮಾಡಿ ಸಿಸಿಟಿವಿ ಫೋಟೆಜ್ ಸಂಗ್ರಹಿಸಲಾಗಿದೆ.

ಎ 11 ನಾಗರಾಜ್ ನಿಂದ ಕೃತ್ಯಕ್ಕೆ ಬಳಸಿದ್ದ ಸ್ಕಾರ್ಪಿಯೋ ವಾಹನ ನಿಲ್ಲಿಸಿದ್ದ ಆರ್ ಆರ್ ನಗರದ ಐಡಿಯಲ್ ಹೋಮ್ಸ್ ಇ ಕ್ರಾಸ್ ನಲ್ಲಿ ಮಹಜರು ನಡೆಸಿದಾಗ ಕೆಎ 03 ಎಂಯು 8821 ಸ್ಕಾರ್ಪಿಯೋ ಕಾರಿನ ಹಿಂಬದಿ ಸೀಟ್ ನಲ್ಲಿ ರಕ್ತದ ಕಲೆಗಳು ಪತ್ತೆಯಾಗಿದ್ದು,ಕಾರು ಜಪ್ತಿ ಮಾಡಲಾಗಿದೆ.

ಆರೋಪಿಗಳಾದ ರಾಘವೇಂದ್ರ ಅಲಿಯಾಸ್ ರಾಘು, ಜಗದೀಶ್, ರವಿ , ಅನು ಕರೆದು–ಕೊಂಡು ಹೋಗಿ ಚಿತ್ರದುರ್ಗದಲ್ಲಿ ಮಹಜರು ನಡೆಸಿ ಅಪಹರಣಕ್ಕೆ ಬಳಸಿದ್ದ ಟೊಯೊಟಾ ಇಟಿಯೋಸ್ ಕಾರು ಜಪ್ತಿ ಮಾಡಿ ಅದರಲ್ಲಿ ದೊರೆತ ರಕ್ತ, ಕೂದಲು, ಬೆರಳಚ್ಚು ಮಾದರಿ ಸಂಗ್ರಹ– ಸಾಂದರ್ಭಿಕ ಸಾಕ್ಷ್ಯವಾಗಿ ಚಿತ್ರದುರ್ಗದ ಬೆಂಗಳೂರು ಮಾರ್ಗದ ಟೋಲ್‌ಗಳ ಸಿಸಿಟಿವಿ ಫೋಟೆಜ್ ಸಂಗ್ರಹಿಸಲಾಗಿದೆ. ಜೊತೆಗೆ ಆರೋಪಿ ಜಗದೀಶ್, ರವಿ ಹಾಗೂ ಅನುಕುಮಾರ್ ನಿವಾಸದಲ್ಲಿ ಮಹಜರು –3ನೇ ಪುಟಕ್ಕೆ

### ಪತ್ನಿ ವಿಜಯಲಕ್ಷ್ಮೀ ಮನೆಯಲ್ಲಿ ಶೂ ಪತ್ತೆ

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆಯಾದ ದಿನ ನಟ ದರ್ಶನ್ ಧರಿಸಿದ್ದ ಶೂ ದರ್ಶನ್ ಅವರ ಪತ್ನಿ ವಿಜಯಲಕ್ಷ್ಮೀ ಮನೆಯಲ್ಲಿ ಪತ್ತೆಯಾಗಿದೆ. ವಿಚಾರಣೆ ವೇಳೆ ಆರೋಪಿಗಳು ನೀಡಿದ ಮಾಹಿತಿ ಮೇರೆಗೆ ಪೊಲೀಸರು ಹೊಸಕೆರೆಹಳ್ಳಿಯಲ್ಲಿರುವ ವಿಜಯಲಕ್ಷ್ಮೀ ಅವರ ಮನೆಯಲ್ಲಿ ದರ್ಶನ್ ಶೂಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಪಟ್ಟಣಗೆರೆಯ ಶೆಡ್‌ನಲ್ಲಿ ರೇಣುಕಾಸ್ವಾಮಿ ಮೇಲೆ ನಟ ದರ್ಶನ್ ಸೇರಿದಂತೆ ಇತರೆ ಆರೋಪಿಗಳು ಮಾರಣಾಂತಿಕ ಹಲ್ಲೆ ನಡೆಸಿ ಕೊಲೆಗೈದಿದ್ದರು. ಬಳಿಕ ದರ್ಶನ್ ಶೆಡ್‌ನಿಂದ ನೇರವಾಗಿ ರಾಜರಾಜೇಶ್ವರಿನಗರದಲ್ಲಿರುವ ತನ್ನ ಮನೆಗೆ ತೆರಳಿ ಬಟ್ಟೆ ಹಾಗೂ ಶೂಗಳನ್ನು ಬದಲಿಸಿ ಸ್ನಾನ ಮಾಡಿಕೊಂಡು ಮೈಸೂರಿಗೆ ತೆರಳಿದ್ದರು ಎಂಬುದು ವಿಚಾರಣೆ ವೇಳೆ ಗೊತ್ತಾಗಿದೆ.

## ಚಾಲಕನ ನಿಯಂತ್ರಣ ತಪ್ಪಿದ ಕಾರು; ವೃತ್ತದ ತಡೆಗೋಡೆಗೆ ಡಿಕ್ಕಿ; ಗಂಭೀರ ಗಾಯ





ದಾವಣಗೆರೆ:–

ಕಾರು ಚಾಲಕನ ನಿಯಂತ್ರಣ ತಪ್ಪಿದ ಕಾ–ರೊಂದು ವೃತ್ತದ ತಡೆಗೋಡೆಗೆ ಡಿಕ್ಕಿ ಹೊಡೆದು, ಪಕ್ಕಕ್ಕೆ ಹಾರಿದ್ದಲ್ಲದೇ ರಸ್ತೆಯಲ್ಲಿ ಹೋಗುತ್ತಿದ್ದ ಬೈಕ್ ಸವಾರನಿಗೆ ಡಿಕ್ಕಿಯಾಗಿ ರಸ್ತೆ ಬೀದಿಯಲ್ಲಿ ಇದ್ದ ಕಾರಿನ ಸರ್ವೀಸ್ ಸ್ಟೇಷನ್‌ಗೆ ನುಗ್ಗಿದ ಘಟನೆ ಇಂದು ಮುಂಜಾನೆ ಸಂಭವಿಸಿದೆ.

ನಗರದ ಎಸ್.ನಿಜಲಿಂಗಪ್ಪ ಬಡಾವಣೆಯ ವೃತ್ತದ ತಡೆಗೋಡೆಗೆ ಮೊದಲು ಕಾರು ಡಿಕ್ಕಿ ಹೊಡೆದಿದೆ. ನಂತರ ರಸ್ತೆಯಲ್ಲಿ ದ್ವಿ ಚಕ್ರ ವಾಹನದಲ್ಲಿ ಸಾಗುತ್ತಿದ್ದ ಬೈಕ್ ಸವಾರರ ಮೇಲೆರಗಿದೆ. ಇದರ ಪರಿಣಾಮ ಬೈಕಿನಲ್ಲಿದ್ದ ಸವಾರರಿಗೆ ಗಂಭೀರ ಗಾಯಗಳಾಗಿವೆ. ಇದಲ್ಲದೆ ಕಾರಿನಲ್ಲಿದ್ದ –3ನೇ ಪುಟಕ್ಕೆ

## ಉಷ್ಣ ಮಾರುತಕ್ಕೆ ಐವರು ಬಲಿ

ನವದೆಹಲಿ:–

ರಾಷ್ಟ್ರ ರಾಜಧಾನಿಯಲ್ಲಿ ಕಳೆದ 72 ಗಂಟೆಗಳ ಅವಧಿಯಲ್ಲಿ ಉಷ್ಣಮಾರುತಕ್ಕೆ ಕನಿಷ್ಠ ಐದು ಮಂದಿ ಬಲಿಯಾಗಿದ್ದಾರೆ. ಈ ಐದು ಮಂದಿ ಬಿಸಿಲ ಹೊಡೆತಕ್ಕೆ ಅಸ್ವಸ್ಥರಾಗಿ ಮೂರು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.ಎರಡು ದಿನದ ಹಿಂದೆ ಸಫ್ದರ್‌ಜಂಗ್ ಆಸ್ಪತ್ರೆಗೆ ದಾಖಲಾಗಿದ್ದ 50 ವರ್ಷದ ವ್ಯಕ್ತಿ ಮೃತಪಟ್ಟಿದ್ದಾರೆ. ಆಸ್ಪತ್ರೆಗೆ ದಾಖಲಾಗಿದ್ದ 60 ವರ್ಷದ ಮಹಿಳೆ ಕೂಡಾ ಸಾವನ್ನಪ್ಪಿದ್ದಾರೆ.40 ವರ್ಷದ ಮಹಿಳಾ ಕೂಲಿ ಕಾರ್ಮಿಕೆ ಮತ್ತು 60 ವರ್ಷ ವಯಸ್ಸಿನ ಭದ್ರತಾ ಸಿಬ್ಬಂದಿ ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆಯಲ್ಲಿ ಅಸು ನೀಗಿದ್ದಾರೆ.ಲೋಕನಾಯಕ ಆಸ್ಪತ್ರೆಯಲ್ಲಿ ಮತ್ತೊಂದು ಸಾವು ಸಂಭವಿಸಿದೆ. 39 ವರ್ಷ ವಯಸ್ಸಿನ ಜನಕಪುರಿಯ ಕಾರು ಮೆಕ್ಯಾನಿಕ್ ಜೂನ್ 15ರಂದು 106 ಡಿಗ್ರಿ ಫ್ಯಾರನ್‌ಹೀಟ್ ತಾಪಮಾನದೊಂದಿಗೆ ಆಸ್ಪತ್ರೆಗೆ ದಾಖಲಾಗಿದ್ದರು. ಮರುದಿನ ಅವರು ಕೊನೆಯುಸಿರೆಳೆದರು.ಈ ವರ್ಷದ ಅತ್ಯಧಿಕ ಕನಿಷ್ಠ ತಾಪಮಾನ 33.8 ಡಿಗ್ರಿ ಸೆಲ್ಸಿಯಸ್ ಮಂಗಳವಾರ ದಾಖಲಾಗಿದ್ದು, ಇದು ಆರು ವರ್ಷಗಳಲ್ಲೇ ಜೂನ್ ತಿಂಗಳ ಅತ್ಯಧಿಕ ಸೆಖೆಯ ರಾತ್ರಿ ಎನಿಸಿಕೊಂಡಿದೆ.ಬಿಸಿಲ ಬೇಗೆಯಿಂದಾಗಿ ವಿದ್ಯುತ್ ಬಳಕೆ ಸರ್ವಕಾಲಿಕ ದಾಖಲೆಯನ್ನು ಕಂಡಿದ್ದು, ಮಂಗಳವಾರ ಮಧ್ಯಾಹ್ನ 8647 ಮೆಗಾವ್ಯಾಟ್ ವಿದ್ಯುತ್ ಬಳಕೆಯಾಗಿದೆ ಎಂದು ಅಧಿಕೃತ ಮೂಲಗಳು ಹೇಳಿವೆ.

## ಡೆಮಾಲಿಷ್ ಆಗುತ್ತಾ ಮನೆ? ಸುಳಿವು ಕೊಟ್ಟೇ ಬಿಟ್ರಾ ಡಿಕೆಶಿ?

### ದರ್ಶನ್‌ಗೆ 'ಗೃಹ' ದೋಷ!





ಬೆಂಗಳೂರು:–

ರೇಣುಕಾಸ್ವಾಮಿ ಕೊಲೆ ಆರೋಪದ ಮೇಲೆ ಪೊಲೀಸ್ ಕಸ್ಟಡಿಯಲ್ಲಿರೋ ನಟ ದರ್ಶನ್‌ಗೆ ಸಾಲು ಸಾಲು ಸಂಕಷ್ಟ ಎದುರಾಗುತ್ತಿದೆ. ಕೊಲೆ ಕೇಸ್‌ನಲ್ಲಿ ಕಾನೂನು ಕುಣಿಕೆ ಬಿಗಿಯಾಗುತ್ತಿ–ರೋ ಹೊತ್ತಲ್ಲೇ, ಅವರ ಮೈಸೂರಿನ ಫಾರ್ಮ್ ಹೌಸ್‌ನಲ್ಲಿ ವಿಶಿಷ್ಟ ಪ್ರಬೇಧದ ಬಾತುಕೋಳಿಯನ್ನು ಕಾನೂನಿನ ಪರವಾನಗಿ ಇಲ್ಲದೇ ಸಾಕಿದ್ದಕ್ಕಾಗಿ ಕೇಸ್ ದಾಖಲಿಸಲು ಅರಣ್ಯಾಧಿಕಾರಿಗಳು ಮುಂ ದಾಗಿದ್ದಾರೆ. ಮತ್ತೊಂಡೆದೆ ಆನೇಕಲ್ ಬಳಿ ಇರೋ ಫಾರ್ಮ್ ಹೌಸ್‌ನಲ್ಲಿ –3ನೇ ಪುಟಕ್ಕೆ

## ಜೂ. 21 ರಂದು ಅನಘಾ ಯೋಗ ಕ್ರಿಯಾ ಶಿಬಿರ




ದಾವಣಗೆರೆ:–

ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ದಾವಣಗೆರೆಯ ಪಿ.ಜೆ. ಬಡಾವಣೆಯ ಮೂರನೇ ಕ್ರಾಸ್ ನಲ್ಲಿರುವ ಶ್ರೀ ಪರಮಹಂಸ ಅಥರ್ವ ಆಯುರ್ಧಾಮದಲ್ಲಿ ಜೂ. 21 ರಂದು ಅನಘಾ ಯೋಗ ಕ್ರಿಯಾ ಶಿಬಿರ ಪ್ರಾರಂಭ ಮಾಡಲಾಗುವುದು ಎಂದು ಯೋಗ ತರಬೇತುದಾರ ಕೆ.ಎಂ. ಕೊಟ್ರೇಶ್ ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಯೋಗ ಯಾವಾಗ, ಯಾವ ಕಾಲದಲ್ಲಿ, ಎಷ್ಟು ಸಮಯ ಮಾಡ ಬೇಕು ಎಂಬುದರ ಸಂಪೂರ್ಣ ಮಾಹಿತಿ ಇರುವುದಿಲ್ಲ. ಕ್ರಮಬದ್ಧವಾಗಿ ಯೋಗ –3ನೇ ಪುಟಕ್ಕೆ

## ಮಹನೀಯರ ಜಯಂತಿ: ಅರ್ಥಪೂರ್ಣ ಆಚರಣೆಗೆ ನಿರ್ಧಾರ: ಬಿ.ಟಿ. ಕುಮಾರಸ್ವಾಮಿ



ಚಿತ್ರದುರ್ಗ:–

ಇದೇ ಜೂನ್ 27 ರಂದು ನಾಡಪ್ರಭು ಕೆಂಪೇಗೌಡ ಜಯಂತಿ ಹಾಗೂ ಜುಲೈ 02 ರಂದು ಡಾ. ಫ.ಗು. ಹಳಕಟ್ಟಿಯವರ ಜನ್ಮದಿನದ ಅಂಗವಾಗಿ "ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಹೇಳಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಮಹನೀಯರ ಜಯಂತಿ ಆಚರಿಸುವ ಸಂಬಂಧ ಅಗತ್ಯ ಸಿದ್ಧತೆ ಕೈಗೊಳ್ಳುವ ಕುರಿತು ಏರ್ಪಡಿಸಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, –3ನೇ ಪುಟಕ್ಕೆ

## ಜೂನ್ 21 ರಂದು 10 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ

## ಹೈಸ್ಕೂಲ್ ಮೈದಾನದಲ್ಲಿ 5-6 ಸಾವಿರ ಯೋಗಪಟುಗಳ ಭಾಗಿಯಾಗುವ ನಿರೀಕ್ಷೆ; ಡಿಸಿ



ದಾವಣಗೆರೆ:–

ಸ್ವಂತ ಮತ್ತು ಸಮಾಜಕ್ಕಾಗಿ ಯೋಗ ಎಂಬ ಘೋಷವಾಕ್ಯದಡಿ ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ನಗರದ ಹೈಸ್ಕೂಲ್ ಮೈದಾನದಲ್ಲಿ ಆಚರಿಸಲಾಗುತ್ತಿದ್ದು 5 ರಿಂದ 6 ಸಾವಿರ ಜನರು ಭಾಗಿಯಾಗಿ ಯೋಗಾಸನ ಮಾಡುವ ನಿರೀಕ್ಷೆ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಯೋಗ ದಿನಾಚರಣೆ ಕುರಿತು ಮಾಹಿತಿ ನೀಡಲು ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನವನ್ನು 195 ದೇಶಗಳಲ್ಲಿ ಆಚರಿಸಲಾಗುತ್ತಿದೆ. ಈ ದಿನ ಪ್ರಕಾಶಮಾನದ ಸಮಯ ಹೆಚ್ಚಾಗಲಿದ್ದು ಹಗಲು ಹೆಚ್ಚು ರಾತ್ರಿ ಕಡಿಮೆಯಾಗುವ ದಿನ ಇದಾಗಿದ್ದು ಹೆಚ್ಚು ಅವಧಿಯಲ್ಲಿ ಪ್ರಕಾಶಮಾನವಾಗಿರಲು ಈ ದಿನವನ್ನು ಅಂತರಾಷ್ಟ್ರೀಯ ಯೋಗ ದಿನವನ್ನಾಗಿ ಘೋಷಣೆ –3ನೇ ಪುಟಕ್ಕೆ

## ಪ್ರತಿ ಹೋಬಳಿಯಲ್ಲಿ ವಸತಿ ಶಾಲೆ ಪ್ರಾರಂಭ: ಸಿಎಂ

ಬೆಂಗಳೂರು:–

ಶಿಕ್ಷಣ ಪಡೆಯುವುದು ಪ್ರತಿಯೊಬ್ಬರ ಮೂಲಭೂತ ಹಕ್ಕು ಆಗಿದ್ದು, ಈ ನಿಟ್ಟಿನಲ್ಲಿ ರಾಜ್ಯದ ಪ್ರತಿ ಹೋಬಳಿ ಮಟ್ಟದಲ್ಲಿ ಕಡ್ಡಾಯವಾಗಿ "ವಸತಿ ಶಾಲೆ" ಪ್ರಾರಂಭಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ.ನಗರದಲ್ಲಿಂದು ವಸಂತ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಎಸ್‌ಎಸ್‌ಎಲ್ ಸಿ ಹಾಗೂ ಮತ್ತು ಪಿಯುಸಿ ಯಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಈ ಹಿಂದಿನ ಬಜೆಟ್ ನಲ್ಲಿಯೇ ಕಡ್ಡಾಯವಾಗಿ ಹೋಬಳಿ



ಮಟ್ಟದಲ್ಲಿ ವಸತಿ ಶಾಲೆ ಆರಂಭ ಮಾಡಲಾಗಿತ್ತು. ಆದರೆ,ಕೆಲವು ಕಡೆ ಇನ್ನೂ ಈ ಯೋಜನೆ –3ನೇ ಪುಟಕ್ಕೆ

# ಸತ್ಯ ಬಾಯಿಟ್ಟ ದರ್ಶನ್

ಬೆಂಗಳೂರು:–

ರೇಣುಕಾಸ್ವಾಮಿ ಕ್ರೂರ ಕೊಲೆ ಪ್ರಕರಣದ ಎರಡನೇ ಆರೋಪಿ ನಟ ದರ್ಶನ್ ಪೊಲೀಸ್ ವಿಚಾರಣೆಯಲ್ಲಿ ಕೊಲೆ ಕೃತ್ಯದಲ್ಲಿ ತನ್ನ ಹೆಸರನ್ನು ಬಾಯ್ಬಿಡದಂತೆ ಮುಚ್ಚಿಹಾಕಲು 30 ಲಕ್ಷ ರೂಗಳನ್ನು ನೀಡಿರುವುದಾಗಿ ಪೊಲೀಸರ ಮುಂದೆ ಸ್ವ ಇಚ್ಛಾ ಹೇಳಿಕೆ ನೀಡಿದ್ದಾರೆ.

ಪೊಲೀಸ್ ವಿಚಾರಣೆಯಲ್ಲಿ ನಟ ದರ್ಶನ್ ಅಲಿಯಾಸ್ ಡಿ ಬಾಸ್ ಸ್ವ– ಇಚ್ಛೆಯ ಹೇಳಿಕೆ ದಾಖಲಿಸಿ ಕೊಲೆಯಾದ ವ್ಯಕ್ತಿಯ ಶವವನ್ನು ವಿಲೇವಾರಿ –3ನೇ ಪುಟಕ್ಕೆ



# ಮಾರುಕಟ್ಟೆ ದರ ಜಿ.ಐ.ಎಸ್.ನಲ್ಲಿ ಮ್ಯಾಪಿಂಗ್ ಹಿನ್ನೆಲೆ:ಕಲಬುರಗಿ ಮಹಾನಗರದ ಎಲ್ಲಾ ಆಸ್ತಿಯನ್ನು ಇ-ಆಸ್ತಿಯನ್ನಾಗಿ ಪರಿವರ್ತಿಸಿ: ಡಾ. ಮಮತಾ ಬಿ. ಆರ್

ಕಲಬುರಗಿ:–

ಕಲಬುರಗಿ ಮಹಾನಗರ ಎಲ್ಲಾ ವಾಣಿಜ್ಯ, ಗೃಹಪಯೋಗಿ, ಕೈಗಾರಿಕೆ, ರಸ್ತೆ ಸೇರಿದಂತೆ ಎಲ್ಲಾ ಬಗೆಯ ಆಸ್ತಿಗಳನ್ನು ಜಿ.ಐ.ಎಸ್. ಆಧಾರಿತ ತಂತ್ರಾಂಶದಲ್ಲಿ ಮ್ಯಾಪಿಂಗ್ ಮಾಡಲಾಗುತ್ತಿದ್ದು, ಮಹಾನಗರದ ಎಲ್ಲಾ ಆಸ್ತಿಗಳನ್ನು ಇ-ಆಸ್ತಿಯನ್ನಾಗಿ ಪರಿವರ್ತಿಸಬೇಕು. ಇದಕ್ಕಾಗಿ ವಿಶೇಷ ಅಭಿಯಾನ ನಡೆಸಬೇಕೆಂದು ರಾಜ್ಯದ ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತೆ ಡಾ. ಮಮತಾ ಬಿ.ಆರ್. ತಿಳಿಸಿದರು.



ಇತ್ತೀಚೆಗೆ ಇಲ್ಲಿನ ಪ್ರಾದೇಶಿಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಜಿ.ಐ.ಎಸ್. ಆಧಾರಿತ ಮಾರ್ಗದರ್ಶಿ ಮೌಲ್ಯ ತರ್ಕಬದ್ಧಗೊಳಿಸುವಿಕೆ ಸಂಬಂಧ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ರಾಜ್ಯದಲ್ಲಿ ಬೆಂಗಳೂರಿನ ರಾಜಾಜಿನಗರ ಮತ್ತು ಕಲಬುರಗಿ ಉಪ ನೋಂದಣಾಧಿಕಾರಿಗಳ ಕಚೇರಿ ವ್ಯಾಪ್ತಿಯಲ್ಲಿ ಪ್ರಾಯೋಗಿಕವಾಗಿ ಎಲ್ಲಾ ರೀತಿಯ ಆಸ್ತಿಗಳನ್ನು ಜಿ.ಐ.ಎಸ್. ಮ್ಯಾಪಿನಲ್ಲಿ ಅಳವಡಿಸಲಾಗುತ್ತಿದೆ. ಇದರಿಂದ ಸಾರ್ವಜನಿಕರು ಮುಕ್ತವಾಗಿ ನಿಖರ ಮಾರುಕಟ್ಟೆ ದರ ತಿಳಿಯಬಹುದಾಗಿದೆ ಎಂದರು.

ಜಿ.ಐ.ಎಸ್. ಆಧಾರಿತ ಈ ತಂತ್ರಾಂಶದಿಂದ ವಾಣಿಜ್ಯ, ಕೈಗಾರಿಕಾ ಹಾಗೂ ವಾಸಯೋಗ್ಯ ಪ್ರದೇಶಗಳನ್ನು ಮತ್ತು ವಿವಿಧ ಸ್ಥರದ ಲೇಯಗಳನ್ನು ಗುರುತಿಸುವುದು, ಮುಖ್ಯ ರಸ್ತೆ, ಅಡ್ಡ ರಸ್ತೆ, ಮೂಲೆ ನಿವೇಶನ ಇತ್ಯಾದಿ ಗುರುತಿಸಲು ಸಹಕಾರಿಯಾಗಿ ನಿಖರ ಮಾರುಕಟ್ಟೆ ದರ ಸಾರ್ವಜನಿಕರಿಗೆ ಲಭ್ಯವಾಗಲಿದೆ. ಹೀಗಾಗಿ ಮಹಾನಗರ ಪಾಲಿಕೆ, ಸಿಟಿ ಸರ್ವೇ, ಕರ್ನಾಟಕ ರಾಜ್ಯ ದೂರಸಂವೇದಿ ಅನ್ವಯಿಕ ಇಲಾಖೆ ಹಾಗೂ ನೋಂದಣಿ ಮತ್ತು ಮುದ್ರಾಂಕ ಇಲಾಖೆಗಳು ಪರಸ್ಪರ ಸಮನ್ವಯತೆಯೊಂದಿಗೆ ಕಾರ್ಯನಿರ್ವಹಿಸಿ ಆಸ್ತಿಗಳ ಜಿ.ಐ.ಎಸ್. ಮ್ಯಾಪಿಂಗ್ ಮಾಡುವತ್ತ ಕೂಡಲೆ ಕಾರ್ಯಪ್ರವೃತ್ತರಾಗಬೇಕೆಂದು ಡಾ. ಮಮತಾ ಬಿ.ಆರ್. ಅವರು ನಿರ್ದೇಶನ ನೀಡಿದರು.

ಕಲಬುರಗಿ ನಗರದಲ್ಲಿನ ವಿವಿಧ ಪ್ರದೇಶ, ಬಸ್ ನಿಲ್ದಾಣ, ರೈಲು ನಿಲ್ದಾಣ, ಸ್ಲಮ್ ಪ್ರದೇಶ, ಕೈಗಾರಿಕೆ ಪ್ರದೇಶ ಶಾಲಾ ವಲಯ, ಕೆ.ಐ.ಎ.ಡಿ.ಬಿ., ಕೆ.ಎಸ್.ಎಸ್.ಐ.ಡಿ.ಸಿ., ಎ.ಪಿ.ಎಂ.ಸಿ, ಮಾರ್ಕೆಟ್ ಏರಿಯಾ ಹೀಗಿ ಇನ್ನಿತರ ಪ್ರದೇಶಗಳ ಮಾರುಕಟ್ಟೆ ಮೌಲ್ಯವನ್ನು ಮಹಾನಗರ ಪಾಲಿಕೆ, ಸಿಟಿ ಸರ್ವೇ, ನಗರಾಭಿವೃದ್ಧಿ ಪ್ರಾಧಿಕಾರದ ಸಿಬ್ಬಂದಿಗಳ ಸಹಕಾರದೊಂದಿಗೆ ಕಲಬುರಗಿ ಹಿರಿಯ ಉಪ ನೋಂದಣಾಧಿಕಾರಿಗಳು ಜಿ.ಐ.ಎಸ್. ಆಧಾರಿತ ತಂತ್ರಾಂಶದಲ್ಲಿ ದತ್ತಾಂಶ ನಮೂದಿಸಬೇಕು.

ಈ ನಾಲ್ಕು ಸಂಸ್ಥೆಗಳು ತಮ್ಮ ಬಳಿ ಇರುವ ದತ್ತಾಂಶಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡು ಕಾರ್ಯನಿರ್ವಹಿಸಬೇಕೆಂದರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ ಮಾತನಾಡಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಈ ಯೋಜನೆಗೆ ವಿಭಾಗದಲ್ಲಿ ಕಂದಾಯ ಇಲಾಖೆಯಿಂದ ಎಲ್ಲಾ ರೀತಿಯ ಸಹಕಾರ ನೀಡಲಾಗುತ್ತದೆ ಎಂದರು.

ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೂಡಲೆ ಇ-ಆಸ್ತಿ ನೋಂದಣಿ ಅಭಿಯಾನ ಕೈಗೊಳ್ಳುವಂತೆ ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು ಜಿ.ಐ.ಎಸ್. ಆಧಾರಿತ ಮ್ಯಾಪಿಂಗ್ ಕಾರ್ಯಕ್ಕೆ ತುಂಬಾ ಉತ್ಸುಕತೆ ತೋರಿದರು.

ಆರಂಭಿಕವಾಗಿ ಕಲಬುರಗಿ ನಗರದ ನಿಜಾಮಪೂರ ಬಡಾವಣೆಯ ಎಲ್ಲಾ ಆಸ್ತಿಗಳನ್ನು ಡಿಜಿಟಲೈಸ್ ಮಾಡಿ 7 ದಿನದೊಳಗೆ ಜಿ.ಐ.ಎಸ್. ಆಧಾರಿತ ಆಸ್ತಿ ದತ್ತಾಂಶ ನಮೂದಿಸಿದ ನಂತರ ಒಂದು ತಿಂಗಳೊಳಗೆ ಉಳಿದ ಬಡಾವಣೆ ಕಾರ್ಯ ಮಾಡಬೇಕು ಎಂದು ಸಭೆಯಲ್ಲಿ ನಿರ್ಧರಿಸಲಾಯಿತು.

ಸಭೆಯಲ್ಲಿ ಭಾಗವಹಿಸಿದ ಮಹಾನಗರ ಪಾಲಿಕೆ ಅಧಿಕಾರಿಗಳು ಕಲಬುರಗಿ ನಗರದಲ್ಲಿ 1.20 ಲಕ್ಷ ಆಸ್ತಿಗಳಿದ್ದು, ಇದರಲ್ಲಿ 30 ಸಾವಿರ ಆಸ್ತಿಗಳಿಗೆ ಇ-ಆಸ್ತಿ ಫಾರಂ-3 ಲಭ್ಯವಿದ್ದು, ಉಳಿದ ಆಸ್ತಿಗಳು ಫಾರಂ-3ಗೆ ಬಾಕಿ ಇವೆ ಎಂದು ಸಭೆಗೆ ತಿಳಿಸಿದರು. ಸಿಟಿ ಸರ್ವೇ ಅಧಿಕಾರಿಗಳು ಮಾತನಾಡಿ ತಮ್ಮ ಬಳಿ 1975 ರಿಂದ ಇದೂವರೆಗೆ ಸುಮಾರು 27 ಸಾವಿರ ಆಸ್ತಿಗಳ ಮಾಹಿತಿ ಲಭ್ಯವಿದೆ ಎಂದರು.

ಸಭೆಯಲ್ಲಿ ನೋಂದಣಿ ಉಪ ಮಹಾಪರಿವೀಕ್ಷಕ (ಸಿವಿಸಿ) ಜೆ.ವಿ.ಯಶೋಧರ, ಸಹಾಯಕ ನೋಂದಣಿ ಉಪ ಮಹಾಪರಿವೀಕ್ಷಕ ಪ್ರಭಾಕರ ಎಲ್.ಎಲ್., ಜಿಲ್ಲಾ ನೋಂದಣಾಧಿಕಾರಿ ಮಲ್ಲಿಕಾರ್ಜುನ ಎಚ್., ಕಲಬುರಗಿ ಮಹಾನಗರ ಪಾಲಿಕೆಯ ಆರೀಫ್ ಪಟೇಲ್, ಪ್ರಹ್ಲಾದ ಬಿ.ಕೆ., ರಮೇಶ ಎಂ. ಪಟ್ಟೇದಾರ, ಉಮೇಶ ಚವ್ಹಾಣ, ಪೀರಪ್ಪ ಪೂಜಾರಿ, ಸಿಟಿ ಸರ್ವೇ ಕಚೇರಿಯ ಈಶ್ವರಚಂದ್ರ, ಕೆ.ಎಸ್.ಆರ್.ಎಸ್.ಎ.ಸಿ. ರಿಜಿನಲ್ ಸೆಂಟರಿನ ಜಗದೀಶ ಎನ್.ಎಸ್., ಶ್ರೀನಿವಾಸ ಬಿ. ಸೇರಿದಂತೆ ಜಿಲ್ಲೆಯ ಎಲ್ಲಾ ಉಪ ನೋಂದಣಾಧಿಕಾರಿಗಳು ಇದ್ದರು.

# ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಯುಎಸ್‌ಎ ನಲ್ಲಿ ಉನ್ನತ ಶಿಕ್ಷಣಕ್ಕೆ ಸಾಕಷ್ಟು ಅವಕಾಶವಿದೆ: ಕೈಲಾಶ್ ಚಿಂತಾಮಣಿ

ಕಲಬುರಗಿ:–

ಶರಣಬಸವ ವಿಶ್ವವಿದ್ಯಾಲಯವು ಅಟ್ಲಾಂಟಿಕ್ಸ್ ವಿಶ್ವವಿದ್ಯಾಲಯದೊಂದಿಗೆ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕುವ ಮೂಲಕ ವಿದ್ಯಾರ್ಥಿಗಳಿಗೆ ಹೇರಳ ಅವಕಾಶಗಳನ್ನು ಒದಗಿಸಿದೆ ಮತ್ತು ಅವರಿಗೆ ಗಖಂ ನಲ್ಲಿ ಇಂಜಿನಿಯರಿಂಗ್ ಉನ್ನತ ಶಿಕ್ಷಣ ಪಡೆದುಕೊಳ್ಳಲು ವಿಶಾಲವಾದ ಮಾರ್ಗವನ್ನು ತೆರೆದಿದೆ ಎಂದು ಅಮೇರಿಕಾ ಅಟ್ಲಾಂಟಿಕ್ಸ್ ವಿಶ್ವವಿದ್ಯಾಲಯದ ವ್ಯವಸ್ಥಾಪಕ ನಿರ್ದೇಶಕ-ಂಖಖಂ ಶ್ರೀ ಕೈಲಾಶ ಚಿಂತಾಮಣಿ ಹೇಳಿದರು.



ಅವರು ಮಂಗಳವಾರ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪ ಸಭಾಮಂಟಪದಲ್ಲಿ "ಜನರೇಟಿವ್ ಎಐ ಇನ್ ಪ್ರಾಜೆಕ್ಟ್ ಮ್ಯಾನೇಜ್‌ಮೆಂಟ್" ಕುರಿತು ಒಂದು ದಿನದ ಅಂತರಾಷ್ಟ್ರೀಯ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಗಖಂ ಫ್ಲೊ.ರಿಡಾದ ಮಿಯಾಮಿಯಲ್ಲಿರುವ ಅಟ್ಲಾಂಟಿಕ್ಸ್ ವಿಶ್ವವಿದ್ಯಾಲಯದಲ್ಲಿ ಒಖ ಕೋಗೆ ಈಗಾಗಲೇ ಶರಣಬಸವ ವಿಶ್ವವಿದ್ಯಾಲಯದ ಇಬ್ಬರು ವಿದ್ಯಾರ್ಥಿಗಳು ತಮ್ಮ ಮಾಸ್ಟರ್ ಆಫ್ ಸೈನ್ಸ್ (ಒಖ) ಕೋಡ್‌ಗೆ ಸೇರಿದ್ದಾರೆ. ಅಟ್ಲಾಂಟಿಕ್ಸ್ ವಿಶ್ವವಿದ್ಯಾಲಯದಲ್ಲಿ ಒಖ ಮಾಡುವ ವಿದ್ಯಾರ್ಥಿಗಳ ಶೈಕ್ಷಣಿಕ ಮತ್ತು ವೃತ್ತಿಪರ ಭವಿಷ್ಯವು ಉಜ್ವಲವಾಗಿರುತ್ತದೆ ಎಂದು ಹೇಳಿದರು.

ಅಮೇರಿಕಾದಲ್ಲಿರುವ ಈ ವಿಶ್ವವಿದ್ಯಾಲಯದಲ್ಲಿ ನಿಯಮಿತ ತರಬೇತಿ ಜೊತೆಗೆ ವಿದ್ಯಾರ್ಥಿಗಳಿಗೆ ಆನ್‌ಲೈನ್ ಐಟಿ ತರಬೇತಿಯನ್ನು ಸಹ ನೀಡಲಾಗುವುದು ಮತ್ತು ವಿಶ್ವವಿದ್ಯಾಲಯಕ್ಕೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಉದ್ಯೋಗಾವಕಾಶಕ್ಕೂ ವಿಶ್ವವಿದ್ಯಾಲಯವು ಸಹಾಯ ಮಾಡುತ್ತದೆ ಎಂದು ಚಿಂತಾಮಣಿ ತಿಳಿಸಿದರು.

ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಅನಿಲಕುಮಾರ ಬಿಡವೆ ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಮಾತನಾಡಿ, ಪ್ರಸ್ತುತ ಶತಮಾನವು ಆರ್ಟಿಫಿಶಿಯಲ್ ಇಂಟೆಲಿಜಂಟ್‌ಗೆ ಸಮರ್ಪಿತವಾಗಿದೆ. ಶರಣಬಸವ ವಿಶ್ವವಿದ್ಯಾಲಯವು ಪದವಿಪೂರ್ವ ಶಿಕ್ಷಣದಲ್ಲಿ ಆರ್ಟಿಫಿಶಿಯಲ್ ಇಂಟೆಲಿಜನ್ಸ್ ಮತ್ತು ಮಷಿನ್ ಲರ್ನಿಂಗ್, ಆರ್ಟಿಫಿಶಿಯಲ್ ಇಂಟೆಲಿಜನ್ಸ್ ಮತ್ತು ಡೇಟಾ ಸೈನ್ಸ್ ಎರಡನ್ನೂ ಪ್ರಾರಂಭಿಸುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಮಾರ್ಗಗಳನ್ನು ತೆರೆದಿದೆ. ನಮ್ಮ ವಿವಿಯಲ್ಲಿ ವಿದ್ಯಾರ್ಥಿಗಳು ಭವಿಷ್ಯದ ಸವಾಲುಗಳನ್ನು ತೆಗೆದುಕೊಳ್ಳಲು ಹಾಗೂ ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಆರ್ಟಿಫಿಶಿಯಲ್ ಇಂಟೆಲಿಜನ್ಸ್ ಮತ್ತು ಡೇಟಾ ಸೈನ್ಸ್ ಸ್ನಾತಕೋತ್ತರ ಕೋಡ್‌ಗಳು ಪ್ರಾರಂಭವಾಗಿವೆ ಎಂದರು.

ಆರ್ಟಿಫಿಶಿಯಲ್ ಇಂಟೆಲಿಜಂಟ್‌ನಲ್ಲಿ ಇನ್ನೂ ಅನೇಕ ಕಾರ್ಯಕ್ರಮಗಳಿದ್ದು, ಹೊಸ ತಂತ್ರಜ್ಞಾನಗಳ ಜಗತ್ತಿಗೆ ಅಳವಡಿಸಿಕೊಂಡು ಸಂಬಂಧಿತ ಕ್ಷೇತ್ರಗಳಲ್ಲಿ ಕೋಡ್‌ಗಳನ್ನು ನೀಡುತ್ತೇವೆ ಎಂದು ಡಾ. ಬಿಡವೆ ಹೇಳಿದರು.

ಅಮೇರಿಕಾದ ಅಟ್ಲಾಂಟಿಕ್ಸ್ ವಿಶ್ವವಿದ್ಯಾಲಯ ಮತ್ತು ಜರ್ಮನಿ ಸೇರಿದಂತೆ ಇತರ ವಿದೇಶಿ ವಿಶ್ವವಿದ್ಯಾಲಯಗಳೊಂದಿಗೆ ಶರಣಬಸವ ವಿಶ್ವವಿದ್ಯಾಲಯವು ಮಾಡಿಕೊಂಡಿರುವ ತಿಳುವಳಿಕಾ ಒಪ್ಪಂದವನ್ನು ಉಲ್ಲೇಖಿಸಿದ ಶ್ರೀ ಬಿಡವೆ, ಅಭಿವೃದ್ಧಿ ಹೊಂದಿದ ದೇಶಗಳ ವಿಶ್ವವಿದ್ಯಾಲಯಗಳೊಂದಿಗಿನ ತಿಳುವಳಿಕಾ ಒಪ್ಪಂದದ ಮುಖ್ಯ ಉದ್ದೇಶವು ಇತ್ತೀಚಿನ ಮತ್ತು ಸಂಬಂಧಿತ ಹೊಸ ತಂತ್ರಜ್ಞಾನಗಳೊಂದಿಗೆ, ಉನ್ನತ ಶಿಕ್ಷಣದಲ್ಲಿ ಶರಣಬಸವ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಕೋಡ್‌ಗಳನ್ನು ತರುವುದಾಗಿದೆ ಎಂದು ಹೇಳಿದರು.

ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ವಿಶ್ವವಿದ್ಯಾಲಯಗಳು ಇತ್ತೀಚಿನ ಮತ್ತು ಉದಯೋನ್ಮುಖ ತಂತ್ರಜ್ಞಾನಗಳನ್ನು ಹೆಚ್ಚು ವೇಗವಾಗಿ ಅಳವಡಿಸಿಕೊಂಡಿವೆ. ಈ ತಂತ್ರಜ್ಞಾನಗಳು ತಾಂತ್ರಿಕ ಶಿಕ್ಷಣಕ್ಕೆ ಹೆಚ್ಚು ಸಮಯ ತೆಗೆದುಕೊಳ್ಳುತ್ತವೆ. ಇದನ್ನು ನಿವಾರಿಸಲು ಶರಣಬಸವ ವಿಶ್ವವಿದ್ಯಾಲಯವು ಹೊಸ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಶಿಕ್ಷಣವನ್ನು ಶರಣಬಸವ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ನೀಡಲು ಈ ವಿಶ್ವವಿದ್ಯಾಲಯಗಳೊಂದಿಗೆ ತಿಳುವಳಿಕೆ ಒಪ್ಪಂದ ಮಾಡಿಕೊಂಡಿದೆ ಎಂದು ಅವರು ಹೇಳಿದರು. ಖಾಸಗಿ ಏಜೆಂಟರು ಮತ್ತು ಸಲಹೆಗಾರರ ಸಹಾಯದಿಂದ ವಿದೇಶಗಳಲ್ಲಿ ಎಂಎಸ್ ಪದವಿ ಕೋಡ್‌ಗಳನ್ನು ಪ್ರವೇಶಿಸಲು ಆಯ್ಕೆ ಮಾಡುವ ವಿದ್ಯಾರ್ಥಿಗಳಿಗೆ ಹೋಲಿಸಿದರೆ, ಶರಣಬಸವ ವಿಶ್ವವಿದ್ಯಾಲಯದ ಮೂಲಕ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಎಂಎಸ್ ಪದವಿ ಕೋಡ್‌ಗಳಿಗೆ ಸೇರುವ ವಿದ್ಯಾರ್ಥಿಗಳು ಅತಿ ಕಡಿಮೆ ಹಣದಲ್ಲಿ ಪ್ರವೇಶ ಪಡೆಯುತ್ತಾರೆ ಎಂದು ಶ್ರೀ ಬಿಡವೆ ತಿಳಿಸಿದರು.

ಬೆಂಗಳೂರಿನ ಎಡ್ವೆಂಚನ ನಿರ್ದೇಶಕರಾದ ಡಾ ಅರುಣ್ ಚಂದ್ರ ಮುದೋಳ್ ಅವರು ತಮ್ಮ ಭಾಷಣದಲ್ಲಿ ವಿದ್ಯಾರ್ಥಿಗಳು ಕೋಡ್‌ಗಳಿಗೆ ಸೇರಲು ಸಾಲ ಸೌಲಭ್ಯಗಳು ಮತ್ತು ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಈ ಕೋಡ್‌ಗಳಿಗೆ ಪ್ರವೇಶದ ಇತರ ವಿವರಗಳ ಕುರಿತು ಎಲ್ಲಾ ಪ್ರಮುಖ ವಿವರಗಳನ್ನು ಒದಗಿಸಿದರು. ಬಾಂಗ್ಲಾದೇಶದ ಢಾಕಾದಲ್ಲಿರುವ ಸ್ಮಾರ್ಟ್ ಯೂನಿವರ್ಸಿಟಿ ಇನ್ನೋವೇಶನ್ ಹನಲ್ಲಿ ತರಬೇತುದಾರರಾದ ಶ್ರೀ ದಿಪೆಶ್ ಬಾನಿಕ್ ಅವರು "ಪ್ರಾಜೆಕ್ಟ್ ಮ್ಯಾನೇಜ್‌ಮೆಂಟ್‌ನಲ್ಲಿ ಜನರೇಟಿವ್ ಎಐ" ಕುರಿತು ವಿಶೇಷ ಉಪನ್ಯಾಸ ನೀಡಿದರು. ಈ ಕಾರ್ಯಕ್ರಮದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವ ಡಾ. ಎಸ್.ಜಿ.ಡೊಳ್ಳೇಗೌಡರ್, ನಿರ್ದೇಶಕ ಪ್ರೊ. ವಿ.ಡಿ.ಮೈತ್ರಿ, ಡೀನ್ ಡಾ. ಲಕ್ಷ್ಮೀ ಪಾಟೀಲ್ ಮಾಕಾ, ಸಂಶೋಧನಾ ನಿರ್ದೇಶಕಿ ಡಾ. ಸುಜಾತಾ ಮಲ್ಲಾಪುರ, ಡೀನ್ ಇಂಜಿನಿಯರಿಂಗ್ ಟೆಕ್ನಾಲಜಿ (ಕೋ-ಎಡ್) ಡಾ. ಶಿವಕುಮಾರ ಜವಳಗಿ ಸೇರಿದಂತೆ ಇತರ ಪ್ರಮುಖರು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

# ಸಿಂಧನೂರು: ಕೆಳಭಾಗಕ್ಕೆ ನೀರು ಹರಿಸಲು ಒತ್ತಾಯ

ಸಿಂಧನೂರು:–

ಎಲ್ಲ ವಿತರಣಾ ಕಾಲುವೆಗಳಿಗೆ ಡಿಸೈನ್ ಪ್ರಕಾರ ಪೈಪ್‌ಗಳನ್ನು ಅಳವಡಿಸಿ, ಕೆಳಭಾಗದ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ಹರಿಸಬೇಕೆಂದು ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘ ತಾಲ್ಲೂಕು ಘಟಕ ಮಂಗಳವಾರ ನಗರದ ಪಿಡಬ್ಲ್ಯುಡಿ ಕ್ಯಾಂಪಿನಲ್ಲಿರುವ ನೀರಾವರಿ ಇಲಾಖೆಯ ಉಪ ವಿಭಾಗದ ಕಚೇರಿಯ ಎದುರು ಧರಣಿ ನಡೆಸಿತು.



'46ನೇ ವಿತರಣಾ ಕಾಲುವೆ ವ್ಯಾಪ್ತಿಯ ಚಿರತನಾಳ ಗ್ರಾಮ ಟೆಲೆಂಡ್‌ಗೆ ಒಳಪಟ್ಟಿದ್ದು, ವಿತರಣಾ ಕಾಲುವೆಯ ಒಳಭಾಗದ 17 ಹಂಚಿಕೆ ಪೈಪುಗಳು ಡಿಸೈನ್ ಮತ್ತು ನಕ್ಷೆ ಪ್ರಕಾರ ಇಲ್ಲ. ಟೆಲೆಂಡ್‌ಗೆ ಗೇಜ್ ಅಳವಡಿಸದೆ ಇರುವುದರಿಂದ ಗ್ರಾಮದ ರೈತರಿಗೆ ನೀರು ಸಿಗುತ್ತಿಲ್ಲ' ಎಂದು ಸಂಘದ ಜಿಲ್ಲಾ ಘಟಕದ ಉಪಾಧ್ಯಕ್ಷ ಬಸವಂತರಾಯಗೌಡ ಕಲ್ಲೂರು ದೂರಿದರು.

'ವಿತರಣಾ ಕಾಲುವೆ 54ರ 3ಆರ್ ಒಳಭಾಗದಲ್ಲಿ ಸುಮಾರು 14 ಪೈಪ್‌ಗಳು ಡಿಸೈನ್ ಪ್ರಕಾರ ಇಲ್ಲ. ಟ್ರ್ಯಾಕ್ಟರ್, ಆಯಿಲ್ ಎಂಜಿನ್, ಸೈಫಾನ್ ಪೈಪ್ ಮುಖಾಂತರ ಅನಧಿಕೃತಗಾಗಿ ಕಾಲುವೆ ನೀರು ಬಳಸಿಕೊಳ್ಳಲಾಗುತ್ತಿದೆ.

ಮುಖ್ಯ ಕಾಲುವೆ 119ನೇ ಸಲಹಾ ಸಮಿತಿಯಲ್ಲಿ ಹೇಳಿರುವ ಆನ್-ಆಫ್ ಪದ್ಧತಿಯನ್ನು ರೈತರು ಒಪ್ಪುವುದಿಲ್ಲ. ಪ್ರಭಾವಿ ರಾಜಕಾರಣಿಗಳು ಮುಖ್ಯ ಕಾಲುವೆಯಿಂದ ಎಡಭಾಗದಲ್ಲಿ ಅಕ್ರಮ ನೀರಾವರಿ ಮಾಡಿಕೊಂಡಿದ್ದು, ಇದನ್ನು ತಡೆಗಟ್ಟಲು ಸೂಕ್ತ ಕ್ರಮಕೈಗೊಳ್ಳಬೇಕು' ಎಂದು ಆಗ್ರಹಿಸಿದರು.

'ಮಲ್ಲಾಪೂರ ಹಾಗೂ ದೇವರಗುಡಿ ಗ್ರಾಮದ 2 ಸಾವಿರ ಎಕರೆ ನೀರಾವರಿಗಾಗಿ ದೇವರಗುಡಿ ಪಿಕ್‌ಅಪ್ ಯೋಜನೆ ಮಾಡಲಾಗಿದೆ. ಹಿಂದಿನ ಗುತ್ತಿಗೆದಾರರು ಪೈಪ್‌ಗಳ ಮಧ್ಯ ರಿಂಗ್ ಜೋಡಿಸಿಲ್ಲ. ನೀರು ಲಿಕೇಜ್ ಆಗುತ್ತಿರುವುದರಿಂದ ಈ ಯೋಜನೆ ನಿಂತು ಹೋಗಿದೆ. ಕೂಡಲೇ ನೀರು ಲಿಕೇಜ್ ಬಂದ್ ಮಾಡಿ ದೇವರಗುಡಿ ಪಿಕ್‌ಅಪ್‌ಗೆ ಮರುಜೀವ ನೀಡಬೇಕು' ಎಂದು ಒತ್ತಾಯಿಸಿದರು.

'ಬೂತಲದಿನ್ನಿ ಗ್ರಾಮದ ಸೀಮೆಯಲ್ಲಿ ಬರುವ 7ಆರ್ ಕಾಲುವೆಯನ್ನು ಸ್ವಚ್ಛಗೊಳಿಸಿ, ದುರಸ್ತಿ ಮಾಡಬೇಕು. ಕಳೆದ ವರ್ಷ ರೈತರು ತಮ್ಮ ಸ್ವಂತ ಹಣಕಾಸಿನ ನೆರವಿನಿಂದ 40 ಸಾವಿರ ಖರ್ಚು ಮಾಡಿ ಕಾಲುವೆ ಸ್ವಚ್ಛ ಮಾಡಿದ್ದು, ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ, ಶಾಸಕರಿಗೆ ಮಾಹಿತಿ ನೀಡಲಾಗಿತ್ತು. ರೈತರು ಖರ್ಚು ಮಾಡಿದ ಹಣವನ್ನು ಹಿಂದಿರುಗಿಸುವುದಾಗಿ ತಿಳಿಸಿದರು. ಆದರೆ ಇಲ್ಲಿಯವರೆಗೆ ಮರುಪಾವತಿ ಮಾಡಿಲ್ಲ' ಎಂದರು.

ಧರಣಿ ಸ್ಥಳಕ್ಕೆ ಬಂದ ಮಸ್ಕಿ ಉಪವಿಭಾಗದ ಎಇಇ ದಾವಲಸಾಬ, ತುರ್ವಿಹಾಳ ಉವಿಭಾಗದ ಎಇಇ ಹನುಮಂತಪ್ಪ, ಸಿಂಧನೂರು ಉಪವಿಭಾಗದ ಅಧೀಕ್ಷಕ ಶಿವಕುಮಾರ ಹಾಗೂ ತಾ.ಪಂ ಎಡಿಎಸ್‌ಆರ್ ಆಲಂಬಾಷಾ ಅವರು ಮನವಿ ಪತ್ರ ಸ್ವೀಕರಿಸಿ ಕೆಲಕಾಲ ಚರ್ಚಿಸಿದರು.

ತಾಲ್ಲೂಕು ಘಟಕದ ಅಧ್ಯಕ್ಷ ಎಚ್.ವಿರೂಪಾಕ್ಷಿಗೌಡ ಕಲ್ಲೂರು, ಕಾರ್ಯದರ್ಶಿ ಶ್ರೀನಿವಾಸರೆಡ್ಡಿ ಮಾವಿನಮಡ್ಡು, ನಾಗೇಶಗೌಡ ಕಲ್ಲೂರು, ಬಾವಿಕಟ್ಟಿ ಯಂಕೋಬ, ನಾಗಪ್ಪ ಹಂಚಿನಾಳ, ಜಗನ್ನಾತರೆಡ್ಡಿ, ವೀರೇಶ ಪಾಟೀಲ ಚಿರತನಾಳ, ಶರಣಪ್ಪ ಚಿರತನಾಳ, ಗೋನಪ್ಪ ದೇವರಗುಡಿ, ಮಲ್ಲಿಕಾರ್ಜುನ ಮುಳ್ಳೂರು, ಬಸವರಾಜ ಮಾಲಿಪಾಟೀಲ, ಎಂ.ಗೋಪಾಲಕೃಷ್ಣ, ಶರಭಣ್ಣ ನಾಗಾಲಾಪೂರ, ಯಂಕಪ್ಪ ಕೆಂಗಲ್ ಪಾಲ್ಗೊಂಡಿದ್ದರು.

# ನಟ ದರ್ಶನ್' ಬಗ್ಗೆ ಈ ಸ್ಪೋಟಕ ಭವಿಷ್ಯ ನುಡಿದ 'ಕೋಡಿಮಠ ಶ್ರೀ'

ಚಿಕ್ಕಬಳ್ಳಾಪುರ:–

ರೇಣುಕಾಸ್ವಾಮಿ ಕೊಲೆ ಕೇಸಲ್ಲಿ ನಟ ದರ್ಶನ್ ಪೊಲೀಸರ ಬಂಧನದಲ್ಲಿದ್ದಾರೆ. ಜೈಲು ಪಾಲಾಗೋ ಸಾಧ್ಯತೆ ಕೂಡ ಇದೆ ಎನ್ನಲಾಗುತ್ತಿದೆ.



ಇದರ ನಡುವೆ ಕೋಡಿಮಠ ಶ್ರೀಗಳು ನಟ ದರ್ಶನ್ ಬಗ್ಗೆ ಸ್ಪೋಟಕ ಭವಿಷ್ಯ ನುಡಿದಿದ್ದಾರೆ.

ಇಂದು ಚಿಕ್ಕಬಳ್ಳಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತ ನಾಡಿದಂತ ಕೋಡಿಮಠದ ಶ್ರೀಗಳಾದ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಅವರು, ಕೋಪದ ಕೈಗೆ ಬುದ್ಧಿ ಕೊಟ್ಟರೇ ಈ ರೀತಿಯ ಘಟನೆಗಳಿಗೆ ಸಾಕ್ಷಿಯಾ ಗುತ್ತದೆ ಎಂಬುದಾಗಿ ಸ್ಪೋಟಕ ಹೇಳಿಕೆ ನೀಡಿದರು.

ಇನ್ನೂ ಉಮಾಪತಿ ಕೂಡ ಕೋಡಿಮಠಕ್ಕೆ ಹೋಗಾದ ಕೋಪ ಕಡಿಮೆ ಮಾಡಿಕೊಳ್ಳಬೇಕು.

ತಂದೆ, ತಾಯಿ ಮಾತು ಕೇಳಬೇಕು ಅಂತ ಅಂದಿದ್ದರು.

ಅದರಂತೆ ನಡೆದುಕೊಂಡ ಕಾರಣ, ಈಗ ಒಳ್ಳೆಯ ಸ್ಥಾನದಲ್ಲಿದ್ದೇನೆ ಅಂತ ಹೇಳಿದ್ದರು ಎಂಬುದಾಗಿ ನೆನಪು ಮಾಡಿಕೊಂಡರು.

ನಟ ದರ್ಶನ್ ಬಗ್ಗೆ ಈ ಸ್ಪೋಟಕ ಭವಿಷ್ಯ ನುಡಿದ ಕೋಡಿ ಮಠ ಶ್ರೀ ನಟ ದರ್ಶನ್ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಪೊಲೀಸರಿಂದ ಬಂಧಿಸಲ್ಪಟ್ಟಿದ್ದಾರೆ. ಕೆಲ ದಿನಗಳಿಂದ ಪೊಲೀಸರ ವಶದಲ್ಲಿರುವಂತ ಅವರನ್ನು ತೀವ್ರ ವಿಚಾರಣೆಗೂ ಒಳಪಡಿಸಲಾಗುತ್ತಿದೆ.

ಈ ಹೊತ್ತಿನಲ್ಲೇ ಕೋಡಿ ಮಠದ ಶ್ರೀಗಳು ಕೋಪದ ಕೈಗೆ ಬುದ್ಧಿ ಕೊಟ್ಟರೆ ಈ ರೀತಿಯ ಅವಗಡಗಳು ಸಂಭವಿಸುತ್ತವೆ. ಕರೆಯದೆ ಬರುವವನು ಕೋಪ, ಬರೆಯದೆ ಓದುವವನು ಕಣ್ಣು, ಬರಿಗಾಲಲ್ಲಿ ನಡೆಯುವವನು ಮನಸ್ಸು ಎಂದರು.

ಒಟ್ಟಾರೆಯಾಗಿ ನಟ ದರ್ಶನ್ ಹಾಗೂ ಉಮಾಪತಿ ಗೌಡ ಅವರ ನಡುವಿನ ಗಲಾಟೆಯ ಬಗ್ಗೆ ನಟ ದರ್ಶನ್ ಕೋಪ ಹಾಗೂ ಉಮಾಪತಿ ತಾಳ್ಮೆಯೇ ಕಾರಣ ಎಂಬುದಾಗಿ ಮಾರ್ಮಿಕವಾಗಿ ಕೋಡಿ ಶ್ರೀ ಹೇಳಿದ್ದಾರೆ.

ಒಂದನೇ ಪುಟದಿಂದ

# ಡೆಮಾಲಿಷ್ ಆಗುತ್ತಾ ಮನೆ? ಸುಳಿವು ಕೊಟ್ಟೇ ಬಿಟ್ರಾ ಡಿಕೆಶಿ?

ಹೌಸ್‌ನಲ್ಲಿ ಮ್ಯಾನೇಜರ್ ಸೂಸೈಡ್ ಮಾಡಿಕೊಂಡಿದ್ದು, ಅಗತ್ಯ ಬಿದ್ದರೆ ಇದೇ ಕೇಸ್‌ನಲ್ಲಿ ದರ್ಶನ್‌ಗೂ ನೋಟಿಸ್ ಕೊಡಬಹುದು ಅಂತ ಪೊಲೀಸ್ ಮೂಲಗಳು ತಿಳಿಸಿವೆ. ಇಷ್ಟೆಲ್ಲಾ ಸಂಕಷ್ಟದ ನಡುವೆ ಬೆಂಗಳೂರಿನ ರಾಜರಾಜೇಶ್ವರಿ ನಗರದಲ್ಲಿರುವ ದರ್ಶನ್ ಮನೆಗೂ ಸಂಕಷ್ಟ ಎದುರಾಗಿದೆ!

**ದರ್ಶನ್ ಮನೆ ತೆರವು ಮಾಡುತ್ತಾ ಸರ್ಕಾರ?**

ಆರ್‌ಆರ್ ನಗರದಲ್ಲಿರುವ ನಟ ದರ್ಶನ್ ನಿವಾಸವನ್ನು ಸರ್ಕಾರ ತೆರವು ಮಾಡುತ್ತಾ? ಈ ಪ್ರಶ್ನೆಗೆ ಡಿಸಿಎಂ ಡಿಕೆ ಶಿವಕುಮಾರ್ ಉತ್ತರಿ ಸಿದ್ದಾರೆ. ಯಾರೇ ಸ್ಟೇ ತಂದಿದ್ದರು ಕಾನೂನು ಪ್ರಕಾರ ಕ್ರಮ ವಹಿಸಿ ತೆರವು ಮಾಡ್ತೀವಿ. ನೀನು ಸ್ಟೇ ತಂದಿದ್ರು ತೆರವು ಮಾಡ್ತೇವೆ, ನಾನು ಸ್ಟೇ ತಂದಿದ್ರು ತೆರವು ಮಾಡ್ತೆವೆ...ಯಾರೇ ಸ್ಟೇ ತಂದಿದ್ರು ತೆರವು ಮಾಡ್ತೀವಿ. ಕಾನೂನು ಪ್ರಕಾರ ಏನು ಮಾಡಬೇಕೋ ಮಾಡ್ತೀವಿ ಅಂತ ಡಿಕೆಶಿ ಹೇಳಿದ್ದಾರೆ.

**ದೊಡ್ಡವರು, ಸಣ್ಣವರು ಅಂತ ನೋಡಲ್ಲ**

ಇನ್ನು ಇದೇ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಸಣ್ಣವರು, ದೊಡ್ಡವರು ಅಂತಾ ನೋಡಲ್ಲ ತೆರವು ಮಾಡ್ತೇವೆ ಅಂತ ಹೇಳಿದ್ದಾರೆ. ಸ್ಟೇ ಇತ್ತು ಅಂತ ನಾವು ವೆಕೆಟ್ ಮಾಡಿರಲಿಲ್ಲ, ಸ್ಟೇ ತೆರವು ಮಾಡಿ ಕಾರ್ಯಾಚರಣೆ ಮಾಡ್ತೀವಿ ಎಂದಿದ್ದಾರೆ. **ಸ್ಟೇ ತೆರವು ಆದ ತಕ್ಷಣ ಕಾರ್ಯಾಚರಣೆ** ಎಷ್ಟು ಸ್ಟೇ ತೆರವು ಆಗುತ್ತೋ ನೋಡ್ತಿವಿ. ಎಲ್ಲೆಲ್ಲಿ ಸ್ಟೇ ಇರುವ ಪ್ರಕರಣಗಳು ಇವೆ ಅಲ್ಲಿ ತೆರವು ಕಾರ್ಯ ಮಾಡ್ತೀವಿ. ಎಷ್ಟು ಬೇಗ ಕೋರ್ಟ್ ನಲ್ಲಿ ಸ್ಟೇ ತೆರವಾಗುತ್ತೆ ನೋಡ್ತೇವೆ. ನಂತರ ಕ್ರಮ ವಹಿಸುತ್ತೇವೆ ಅಂತ ತುಷಾರ್ ಗಿರಿನಾಥ್ ಭರವಸೆ ನೀಡಿದ್ದಾರೆ. ಯಾರೇ ಒತ್ತುವರಿ ಮಾಡಿ ಸ್ಟೇ ತಂದಿದ್ರೂ ಕೂಡ ಕಾನೂನಿನ ಪ್ರಕಾರ ತೆರವು ಮಾಡಲು ಸೂಚನೆ ನೀಡ್ತೀವಿ ಅಂತ ಅವರು ಹೇಳಿದ್ದಾರೆ.

**ರಾಜಕಾಲುವೆ ಒತ್ತುವರಿ ಮಾಡಿ ಮನೆ ಕಟ್ಟಿದ್ರಾ ದರ್ಶನ್?** ಆರ್‌ಆರ್ ನಗರದಲ್ಲಿ ದರ್ಶನ್ ಅವರ ಮನೆ ಇದೆ. ಐಡಿಯಲ್ ಹೋಮ್ಸ್ ಲೇಔಟ್‌ನಲ್ಲಿ ತೂಗುದೀಪ ಹೆಸರಿನ ಮನೆ ಇದ್ದು, ಅದನ್ನು ರಾಜಕಾಲುವೆ ಒತ್ತುವರಿ ಮಾಡಿ ಕಟ್ಟಲಾಗಿದೆ ಎಂಬ ಆರೋಪ ಕೇಳಿ ಬಂದಿತ್ತು.

**ಒತ್ತುವರಿ ತೆರವಿನ ವಿರುದ್ಧ ಕೋರ್ಟ್ ಮೊರೆ**

ಅದೇ ಜಾಗದಲ್ಲಿ ಶಾಮನೂರು ಶಿವಶಂಕರಪ್ಪ ಸೇರಿದಂತೆ ಹಲವು ಘಟಾನುಘಟಿ ನಾಯಕರು, ಪ್ರಭಾವಿಗಳ ಮನೆ, ಕಟ್ಟಡಗಳಿದ್ದು, ಅವೆಲ್ಲವೂ ಒತ್ತುವರಿ ಜಾಗದಲ್ಲಿ ನಿರ್ಮಾಣವಾಗಿದೆ ಎನ್ನಲಾ ಗಿದೆ. ಬಿಬಿಎಂಪಿ ಇಂತಹ 67 ಅಕ್ರಮ ಕಟ್ಟಡಗಳನ್ನು ಗುರುತಿಸಿದ್ದು, ತೆರವಿಗೆ ಮುಂದಾಗಿತ್ತು. ಆದರೆ ಕೋರ್ಟ್‌ನಿಂದ ಸ್ಟೇ ತರಲಾಗಿತ್ತು.

**ದರ್ಶನ್ ಮನೆ ತೆರವು ಮಾಡಲು ಹಿಂದೇಟು ಹಾಕಿದ್ರಾ ಅಧಿಕಾರಿಗಳು?**

ಈ ಹಿಂದೆ ರಾಜಕಾಲುವೆ ಒತ್ತುವರಿ ಕಾರ್ಯಾಚರಣೆ ಬಿಬಿಎಂಪಿಯಿಂದ ದೊಡ್ಡಮಟ್ಟದಲ್ಲಿ ನಡೆದಿತ್ತು. ಬೆಂಗಳೂರಿನ ಹಲವೆಡೆದೆ ಒತ್ತುವರಿ ಜಾಗದಲ್ಲಿ ಕಟ್ಟಿದ್ದ ಜನ ಸಾಮಾನ್ಯರ ಮನೆ, ಕಟ್ಟಡಗಳನ್ನು ಡೆಮಾಲಿಷ್ ಮಾಡಲಾಗಿತ್ತು. ಆದರೆ ದರ್ಶನ್ ಸೇರಿದಂತೆ ಹಲವು ಪ್ರಭಾವಿಗಳ ಮನೆ ತೆರವು ಮಾಡಲು ಬಿಬಿಎಂಪಿ ಅಧಿಕಾರಿಗಳು ಹಿಂದೇಟು ಹಾಕಿದ್ದರು ಎಂಬ ಆರೋಪ ಕೇಳಿ ಬಂದಿತ್ತು.

## ಹೈಸ್ಕೂಲ್ ಮೈದಾನದಲ್ಲಿ 5-6 ಸಾವಿರ ಯೋಗಪಟುಗಳ ಭಾಗಿಯಾಗುವ ನಿರೀಕ್ಷೆ; ಡಿಸಿ

ಮಾಡಲಾಗಿದೆ ಎಂದರು. ಯೋಗ ಎಂಬುದು ಭಾರತದ ಪ್ರಾಚೀನ, ಪಾರಂಪರಿಕ, ಆಧ್ಯಾತ್ಮಿಕ ಪದ್ದತಿಯಾಗಿದ್ದು ಇದರಿಂದ ಭೌದ್ದಿಕ ಅಭಿವೃದ್ದಿ, ಮಾನಸಿಕ ಸಮತೋಲನ, ಸಮಚಿತ್ತತೆ ಕಾಪಾಡಲು ಸಹಕಾರಿಯಾಗಿದ್ದು ಆರೋಗ್ಯ ಕಾಪಾಡಿಕೊಳ್ಳಲು ಪ್ರತಿಯೊಬ್ಬರು ಯೋಗಾಭ್ಯಾಸದಲ್ಲಿ ತೊಡಗಿಕೊಳ್ಳಬೇಕೆಂದು ಮತ್ತು ಈ ಬಗ್ಗೆ ಹೆಚ್ಚು ಜಾಗೃತಿ ಮೂಡಿಸುವುದು ಯೋಗ ದಿನದ ಪ್ರಮುಖ ಉದ್ದೇಶವಾಗಿದೆ ಎಂದರು. ದಾವಣಗೆರೆ ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ಕಾರ್ಯಕ್ರಮ ನಡೆಯಲಿದ್ದು ಜಿಲ್ಲಾ ಮಟ್ಟದ ಕಾರ್ಯಕ್ರಮ ನಗರದ ಹೈಸ್ಕೂಲ್ ಮೈದಾನದಲ್ಲಿ ಜೂನ್ 21 ರಂದು ಬೆಳಗ್ಗೆ 5.30 ರಿಂದ ಧ್ಯಾನದೊಂದಿಗೆ ಆರಂಭವಾಗಲಿದೆ. ಬೆಳಗ್ಗೆ 6.30 ರಿಂದ 7 ರವರೆಗೆ ಕಾರ್ಯಕ್ರಮದ ಉದ್ಘಾಟನೆ ಮತ್ತು ವೇದಿಕೆ ಕಾರ್ಯಕ್ರಮ ನಡೆಯಲಿದೆ. ಸಾಮಾನ್ಯ ಯೋಗ ಶಿಷ್ಠಾಚಾರ ಬೆ.7 ರಿಂದ 7.45 ರವರೆಗೆ ನಡೆಯಲಿದೆ. ಯೋಗ ದಿನಾಚರಣೆಯನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ಸೇರಿದಂತೆ ಎಲ್ಲಾ ಇಲಾಖೆಗಳು, ತಪೋವನ ಆಯುರ್ವೇದ, ಯೋಗ ಮತ್ತು ನ್ಯಾಚುರೋಪತಿ ಮೆಡಿಕಲ್ ಕಾಲೇಜು, ಅಶ್ವಿನಿ ಆಯುರ್ವೇದ ಮೆಡಿಕಲ್ ಕಾಲೇಜು, ಎನ್.ಸಿ.ಸಿ, ಎನ್.ಎಸ್.ಎಸ್, ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾನಿಲಯ, ಪತಂಜಲಿ ಯೋಗ ಶಿಕ್ಷಣ ಸಮಿತಿ, ಪತಂಜಲಿ ಯೋಗ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು.

## ಜೂ. 21 ರಂದು ಅನಘಾ ಯೋಗ ಕ್ರಿಯಾ ಶಿಬಿರ

ಕಲಿಸಿ ಕೊಡುವ ಉದ್ದೇಶದಿಂದ ಅನಘಾ ಯೋಗ ಕ್ರಿಯಾ ಶಿಬಿರವನ್ನು ಉಚಿತವಾಗಿ ಕಲಿಸಿ ಕೊಡಲಾಗುತ್ತಿದೆ ಎಂದು ತಿಳಿಸಿದರು. ಶುಕ್ರವಾರ ಬೆಳಗ್ಗೆ 8ಕ್ಕೆ ಯೋಗಗುರು ಚನ್ನ ಬಸವಣ್ಣ ಅವರು ಶಿಬಿರ ಉದ್ಘಾಟಿಸುವರು. ಮೊದಲ ದಿನ ಸೂರ್ಯ ನಮಸ್ಕಾರ ಮಾತ್ರ ಕಲಿಸಿಕೊಡಲಾಗುವುದು. ಜೂ. 24 ರಿಂದ 21 ದಿನಗಳ ಕಾಲ ಎರಡು ಬ್ಯಾಚ್ ನಲ್ಲಿ ಶಿಬಿರ ನಡೆಯಲಿದೆ. ಪ್ರತಿ ಬ್ಯಾಚ್ ನಲ್ಲಿ 12 ಜನರಿಗೆ ಅವಕಾಶ ಇದೆ. ಆಸಕ್ತರು ಹೆಚ್ಚಿನ ಮಾಹಿತಿ ಮತ್ತು ನೋಂದಣಿಗೆ 63622-26505 ಗೆ ಸಂಪರ್ಕಿಸುವಂತೆ ಕೋರಿದರು. ಡಾ. ಬಿ.ಸಿ. ಸುಮತಿ ಇದ್ದರು.

## ಚಾಲಕನ ನಿಯಂತ್ರಣ ತಪ್ಪಿದ ಕಾರು; ವೃತ್ತದ ತಡೆಗೋಡೆಗೆ ಡಿಕ್ಕಿ; ಗಂಭೀರ ಗಾಯ

ರಾಮಸೇನೆಯ ಜಿಲ್ಲಾಧ್ಯಕ್ಷ ಮಣಿ ಸರ್ಕಾರ್ ಗೂ ಗಂಭೀರ ಗಾಯಗಳಾಗಿದ್ದು, ಬೈಕ್ ನಲ್ಲಿದ್ದ ಗಾಯಾಳುಗಳನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತದ ಗಂಭೀರತೆ ಎಷ್ಟಿತ್ತೆಂದರೆ ದಾವಣಗೆರೆ ನಗರದ ರಿಂಗ್ ರಸ್ತೆಯ ಕ್ಲಾಕ್ ಗಡಿಯಾರ ವೃತ್ತದಲ್ಲಿರುವ ತಡೆಗೋಡೆಗೆ ಅತಿ ವೇಗವಾಗಿ ಬಾಪೂಜಿ ಸಮುದಾಯ ಕಡೆಯಿಂದ ಬಂದ ಕಾರು ಡಿಕ್ಕಿ ಹೊಡೆದು ತಿರುಗುತ್ತ ಹೋಗಿ ವೃತ್ತದಲ್ಲಿ ಬರುತ್ತಿದ್ದ ಬೈಕ್ ಗೆ ಡಿಕ್ಕಿ ಹೊಡೆದು ನಂತರ ವೃತ್ತದಲ್ಲಿದ್ದ ಕಾರ್ ಸರ್ವೀಸ್ ಸ್ಟೇಷನ್ ಗೆ ನುಗ್ಗಿದೆ. ಅಪಘಾತದಲ್ಲಿ ಬೈಕಿನಲ್ಲಿದ್ದ ಇಬ್ಬರ ಪೈಕಿ ಓರ್ವನಿಗೆ ಗಂಭೀರ ಗಾಯಗಳಾಗಿದ್ದು, ಕಾರಿನಲ್ಲಿ ಇದ್ದ ಇಬ್ಬರೂ ಕೂಡ ಗಂಭೀರವಾಗಿ ಗಾಯಕೊಂಡಿದ್ದು, ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ತಿಳಿದು ಬಂದಿದೆ. ಅಪಘಾತ ಆಗುತ್ತಿದ್ದ ಸುದ್ದಿ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಸ್ಥಳೀಯರುಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸುವಲ್ಲಿ ನೆರವಾದರು.

## ಮಹನೀಯರ ಜಯಂತಿ: ಅರ್ಥಪೂರ್ಣ ಆಚರಣೆಗೆ ನಿರ್ಧಾರ: ಬಿ.ಟಿ. ಕುಮಾರಸ್ವಾಮಿ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದೊಂದಿಗೆ ಶಿಷ್ಟಾಚಾರದ ಅನುಸಾರ ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ಆಚರಿಸಲು ತೀರ್ಮಾನಿಸಲಾಯಿತು.

ಜೂ. 27 ರಂದು ನಾಡಪ್ರಭು ಕೆಂಪೇಗೌಡ ಜಯಂತಿ: ಇದೇ ಜೂನ್ 27 ರಂದು ಬೆಳಿಗ್ಗೆ 11ಕ್ಕೆ ನಗರದ ತರಾಸು ರಂಗಮಂದಿರ ಅಥವಾ ಜಿಲ್ಲಾಧಿಕಾರಿಗಳ ಕಚೇರಿ ಈ ಎರಡೂ ಸ್ಥಳಗಳಲ್ಲಿ ಯಾವುದಾದರೂ ಒಂದು ಸ್ಥಳದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮ ನಡೆಸಲು ಚರ್ಚಿಸಲಾಯಿತು. ಕಾರ್ಯಕ್ರಮ ನಡೆಯುವ ಸ್ಥಳದ ಕುರಿತು ಹಾಗೂ ಕೆಂಪೇಗೌಡರ ಕುರಿತು ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಗಳನ್ನು ಒಂದೆರೆಡು ದಿನಗಳಲ್ಲಿ ಅಂತಿಮಗೊಳಿಸಲಾಗುವುದು ಎಂದು ಸಮಾಜದ ಮುಖಂಡರು ತಿಳಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಮಾತನಾಡಿ, ಸರ್ಕಾರದ ಶಿಷ್ಟಾಚಾರದ ಅನುಸಾರ ಜಯಂತಿ ಕಾರ್ಯಕ್ರಮ ಆಚರಿಸಲಾಗುವುದು. ಸಂಗೀತ ಕಾರ್ಯಕ್ರಮ ಆಯೋಜನೆ ಸೇರಿದಂತೆ ಜಯಂತಿ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು.ಸಭೆಯಲ್ಲಿ ಜಿಲ್ಲಾ ಒಕ್ಕಲಿಗರ ಸಂಘದ ಕಾರ್ಯದರ್ಶಿ ಜಗನ್ನಾಥ್, ಉಪಾಧ್ಯಕ್ಷ ಮಂಜುಕುಮಾರ್, ನಿರ್ದೇಶಕರಾದ ರಂಗಧಾಮಯ್ಯ ಆರ್.ಪರಮೇಶ್ವರ, ಆರ್. ಚಿದಾನಂದಪ್ಪ, ನರೇಂದ್ರ ಬಾಬು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಹಲವೆಡೆ ಮಹಜರು ಪ್ರಮುಖ ಸಾಕ್ಷಿಗಳು ಜಪ್ತಿ

ಮಹಜರು ನಡೆಸಿ ಮೃತ ರೇಣುಕಾ ಸ್ವಾಮಿಯ ಚಿನ್ನದ ಸರ, ಉಂಗುರ, ವಾಚ್ ಜಪ್ತಿ ಮಾಡಿ. ಮೃತದೇಹ ಸಾಗಿಸುವ ವೇಳೆ ರೇಣುಕಾ ಸ್ವಾಮಿಯ ಚಿನ್ನಾಭರಣವನ್ನು ತೆಗೆದುಕೊಂಡಿದ್ದ ಜಗದೀಶ್, ವಾಚ್ ತೆಗೆದುಕೊಂಡಿದ್ದ ಅನುಕುಮಾರ್ ನಿಂದ ಅವುಗಳನ್ನು ವಶಪಡಿಸಿಕೊಳ್ಳಲಾಗಿದೆ. ಎ 14 ಪ್ರದೋಶ್ ಅನ್ನು ಕರೆದೊಯ್ದು ಸುಮ್ಮನಹಳ್ಳಿಯ ಮೋರಿ ಬಳಿ ಮೊಬೈಲ್ ಗಾಗಿ ಮಹಜರು ನಡೆಸಲಾಗಿದೆ,ಆದರೆ ಮೊಬೈಲ್ ಪತ್ತೆಯಾಗದೇ ಅಗ್ನಿಶಾಮಕ ದಳದ ಮೊರೆ ಹೋಗಲಾಗಿದೆ. ಆರೋಪಿ ರಾಘವೇಂದ್ರನನ್ನು ಕರೆದೊಯ್ದು ಆರ್ ಆರ್ ನಗರದ 18 ನೇ ಕ್ರಾಸ್ ನ ಐಡಿಯಲ್ ಹೋಮ್ಸ್ ನಲ್ಲಿ ಮಹಜರು ನಡೆಸಿ ಕೊಲೆಯ ವೇಳೆ ಧರಿಸಿದ್ದ ಬಟ್ಟೆ ಮತ್ತು ಬದಲಾಯಿಸಿದ್ದ ಚಪ್ಪಲಿಯನ್ನು ವಶಪಡಿಸಿಕೊಳ್ಳಲಾಗಿದೆ. ಆರೋಪಿ ಕಾರ್ತಿಕ್ ಅನ್ನು ಕರೆದೊಯ್ದು ಆರ್ ಆರ್ ನಗರದ ಟ್ರೋಬೋ ಹೋಟಲ್ 98 ಸ್ವೀಟ್ ರೂಮ್ ನಂ 203 ರಲ್ಲಿ ಮಹಜರು ನಡೆಸಿ ಕೊಲೆಯ ನಂತರ ಹೋಟಲ್ ನಲ್ಲಿ ಕಾರ್ತಿಕ್ ಜೊತೆಗೆ ಕೇಶವ್ ನಿಖಿಲ್ ತಂಗಿದ್ದ ಹೋಟೆಲ್, ಕೃತ್ಯದ ಸಮಯದಲ್ಲಿ ಧರಿಸಿದ್ದ ಬಟ್ಟೆಗಳನ್ನು ವಶಕ್ಕೆ ಪಡೆಯಲಾಗಿದೆ. ದರ್ಶನ್ ಮತ್ತು ಪವನ್ ಕರೆದೊಯ್ದು ಆರ್ ಆರ್ ನಗರದ ನಿವಾಸದಲ್ಲಿ ಮಹಜರು ಮಾಡಲಾಗಿದೆ. ಕೃತ್ಯದ ಸಮಯದಲ್ಲಿ ದರ್ಶನ್ ಧರಿಸಿದ್ದ ಬಟ್ಟೆಗಳು ಮನೆಯ ಟೇರೆಸ್ ನಲ್ಲಿ ಒಗೆದು ಒಣಗಲು ಹಾಕಿತ್ತು. ಪೊಲೀಸರು ದರ್ಶನ್ ನೀಡಿದ ಮಾಹಿತಿಯಂತೆ ಕೃತ್ಯದ ದಿನ ಧರಿಸಿದ್ದ ನೀಲಿ ಬಣ್ಣದ ಟ್ರೊ ರಿಲಿಜನ್ ಹೆಸರಿನ ಜೀನ್ಸ್ ಪ್ಯಾಂಟ್ ಹಾಗೂ ಒಪಿಮ್ ವ್ಯಾಲಿ ಹೆಸರಿನ ಕಪ್ಪು ಬಣ್ಣದ ರೌಂಡ್ ನೇಕ್ ಟೀ ಶಾರ್ಟ್ ಜಪ್ತಿ ಮಾಡಿ ಸಿಸಿಟಿವಿ ದೃಶ್ಯಗಳನ್ನು ಸಂಗ್ರಹಿಸಲಾಗಿದೆ. ದರ್ಶನ್ ಧರಿಸಿದ್ದ ಲೂಫರ್ಸ್ ಡಿಸೈನ್ ನೀಲಿ ಬಣ್ಣದ ಶೂ ಪತ್ನಿ ವಿಜಯಲಕ್ಷ್ಮಿ ವಾಸವಾಗಿರುವ ಹೊಸಕೆರೆಹಳ್ಳಿಯ ಪ್ರೆಸ್ಟೀಜ್ ಸೌತ್ ರಿಡ್ಜ್ ಅಪಾರ್ಟ್ಮೆಂಟ್ ನಿಂದ ವಶಪಡಿಸಿಕೊಳ್ಳಲಾಗಿದೆ. ನಿಖಿಲ್ ನಾಯಕ್ ವಾಸವಾಗಿದ್ದ ಬನ್ನೇರುಘಟ್ಟ ರಸ್ತೆಯ ಕೆಂಬತ್ತಳ್ಳಿ ನಿವಾಸದಲ್ಲಿ ಮಹಜರು ನಡೆಸಿ ಮನೆಯಲ್ಲಿದ್ದ 4.5 ಲಕ್ಷ ರೂ ಹಣ ಹಾಗೂ ಮೊಬೈಲ್ ಫೋನ್ ವಶಕ್ಕೆ ಪಡೆಯಲಾಗಿದೆ. ಎ 1 ಆರೋಪಿ ಪವಿತ್ರಗೌಡ ಕರೆದೊಯ್ದು ಆರ್ ಆರ್‌ನಗರದ ನಿವಾಸದಲ್ಲಿ ಮಹಜರು ನಡೆಸಿ ಕೃತ್ಯದ ಸಮಯದಲ್ಲಿ ಧರಿಸಿದ್ದ ಬಟ್ಟೆ ಮತ್ತು ಚಪ್ಪಲಿ ವಶಪಡಿಸಿಕೊಳ್ಳಲಾಗಿದೆ. ಎ 10 ಆರೋಪಿ ವಿನಯ್ ನನ್ನ ಕರೆದೊಯ್ದು ಆರ್ ಆರ್ ನಗರದ ಸ್ಟೋನಿಬ್ರೂಕ್ ನಲ್ಲಿ ಮಹಜರು ನಡೆಸಿ ಸಿಸಿಟಿವಿ ದೃಶ್ಯಗಳನ್ನು ಸಂಗ್ರಹಿಸಲಾಗಿದೆ.

## ಪ್ರತಿ ಹೋಬಳಿಯಲ್ಲಿ ವಸತಿ ಶಾಲೆ ಪ್ರಾರಂಭ: ಸಿಎಂ

ಕಡೆ ಇನ್ನೂ ಈ ಯೋಜನೆ ತಲುಪಲಿಲ್ಲ. ಹಾಗಾಗಿ, ಈ ವರ್ಷ 20 ಹೋಬಳಿಗಳಲ್ಲಿ ರೆಸಿಡೆನ್ಸಿಯಲ್ ಶಾಲೆ ಪ್ರಾರಂಭ ಮಾಡಲಾಗುವುದು. ಹಂತ ಹಂತವಾಗಿ ಎಲ್ಲಾ ಹೋಬಳಿಗಳಲ್ಲೂ ರೆಸಿಡೆನ್ಸಿಯಲ್ ಶಾಲೆಗಳು ಬರಲಿವೆ ಎಂದರು.ಸರ್ಕಾರಿ ಶಾಲೆಗಳಲ್ಲಿ ಹೆಚ್ಚು ಅಂಗ ಪಡೆದಿರುವ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಬೇಕು. ಆ ಮೂಲಕ ಉತ್ತೇಜನ ನೀಡಬೇಕೆಂಬ ಉದ್ದೇಶದಿಂದ ಈ ಮಾದರಿಯಲ್ಲಿ ಪ್ರೋತ್ಸಾಹ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದ ಅವರು, ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ 833 ರೆಸಿಡೆನ್ಸಿಯಲ್ ಶಾಲೆಗಳಿವೆ. ಅಲ್ಪಸಂಖ್ಯಾತರ ಇಲಾಖೆ ಅಡಿಯಲ್ಲಿ 113 ರೆಸಿಡೆನ್ಸಿಯಲ್ ಶಾಲೆಗಳಿವೆ ಮುಂದಿನ ದಿನಗಳಲ್ಲಿ ಇದರ ಸಂಖ್ಯೆ ಹೆಚ್ಚಾಗಲಿದೆ ಎಂದು ತಿಳಿಸಿದರು.ವಿಧಾನಪರಿಷತ್ ಸಭಾಧ್ಯಕ್ಷ ಬಸವರಾಜ ಹೊರಟ್ಟಿ ಮಾತನಾಡಿ, ಹೆಚ್.ಸಿ.ಮಹದೇವಪ್ಪ ಅವರನ್ನು ಸಮಾಜ ಕಲ್ಯಾಣ ಸಚಿವರನ್ನಾಗಿ ಮಾಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಡಿಗೆ ಉತ್ತಮ ಕೊಡುಗೆ ನೀಡಿದ್ದಾರೆ ಎಂದು ನುಡಿದರು.ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿ, ಮೀಸಲಾತಿ ಜಾರಿಯಿಂದ ನಾನು ಸಂತೋಷ ಪಡುವುದಿಲ್ಲ.ಆದರೆ, ಅಧಿಕಾರ ನಿರ್ಣಯ ದಲ್ಲಿ ಕುಳಿತುಕೊಂಡಾಗ ಮಾತ್ರ ನನ್ನ ಕನಸು ನನಸು ಆಗಲಿದೆ ಎಂದು ಡಾ.ಅಂಬೇಡ್ಕರ್ ಹೇಳಿದ್ದರು.ಅವರ ಈ ಮಾತನ್ನು ಚಾಚೂ ತಪ್ಪದೇ ಮಾಡಬೇಕು ಎಂದು ನುಡಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕನಸು ಮತ್ತು ಕಾಳಜಿಯ ಕಾರಣಕ್ಕೆ ರಾಜ್ಯದಲ್ಲಿ ಮೊರಾರ್ಜಿ ದೇಸಾಯಿ ಶಾಲೆಗಳು, ಆಶ್ರಮ ಶಾಲೆಗಳು, ವಸತಿ ಶಾಲೆಗಳು ಹೆಚ್ಚೆಚ್ಚು ಆರಂಭಗೊಂಡು ದಲಿತ, ಹಿಂದುಳಿದ, ಆದಿವಾಸಿ ಮತ್ತು ಬುಡಕಟ್ಟು ಮಕ್ಕಳ ಶೈಕ್ಷಣಿಕ, ಸಾಂಸ್ಕೃತಿಕ ಪ್ರಗತಿಗೆ ನೆರವಾಗುತ್ತಿದ್ದಾರೆ ಎಂದು ಹೇಳಿದರು.ಶೋಷಿತರಿಗೆ, ಅವಕಾಶ ವಂಚಿತರಿಗೆ ಅಂಬೇಡ್ಕರ್ ಅವರು ಪ್ರೇರಣಾ ಶಕ್ತಿಯಾಗಿದ್ದಾರೆ. ವೈಚಾರಿಕ ಆಲೋಚನೆಗಳ ಮೂಲಕ ನಮ್ಮ ಹಕ್ಕುಗಳನ್ನು ಪಡೆಯಬೇಕು. ಭಾರತವು ಬಹುತ್ವದ ರಾಷ್ಟ್ರವಾಗಿದ್ದು, ವೈವಿಧ್ಯತೆಯಲ್ಲಿ ಏಕತೆ ಇರುವ ನೆಲವಾಗಿದೆ. ಸಂವಿಧಾನವನ್ನು ನಾವು ರಕ್ಷಿಸಿದರೆ, ನಮ್ಮನ್ನು ಸಂವಿಧಾನವು ರಕ್ಷಿಸಲಿದೆ. ಪ್ರಜಾಪ್ರಭುತ್ವದ ಕತ್ತು ಹಿಸುಕುವ ಪ್ರಯತ್ನಗಳ ವಿರುದ್ಧ ನಾವು ಜಾಗೃತರಾಗಬೇಕಿದೆ ಎಂದು ಅವರು ಹೇಳಿದರು.ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದಂದು ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರಜಾಪ್ರಭುತ್ವ ಕುರಿತಾದ ಹೇಳಿಕೆಯನ್ನು ಒಮ್ಮೆ ಸ್ಮರಿಸೋಣ. ರಕ್ತಪಾತವಿಲ್ಲದೇ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಗಳನ್ನು ತರುವಂತಹ ವ್ಯವಸ್ಥೆಯೇ ಪ್ರಜಾಪ್ರಭುತ್ವ ಎನ್ನುವ ಮೂಲ?ಮಂತ್ರದೊಂದಿಗೆ ನಮ್ಮ ಸಂವಿಧಾನವನ್ನು ರಚಿಸಲಾಗಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದಂದು ಸಂವಿಧಾನದ ಪೀಠಿಕೆಯನ್ನು ಸಾಮೂಹಿಕವಾಗಿ ವಾಚನ ಮಾಡುವ ವಿಶೇಷ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರ ಹಮ್ಮಿಕೊಂಡಿತ್ತು. ಇಂಥ ಮಹತ್ವದ ದಿನದ ಸಂದರ್ಭದಲ್ಲಿ ಸಂವಿಧಾನ ಪೀಠಿಕೆ, ಭ್ರಾತೃತ್ವ, ಸಾಮರಸ್ಯ ಹಾಗೂ ಸಮಾನತೆಯ ಕುರಿತು ಅರಿತುಕೊಳ್ಳುವುದು ಅತಿ ಮುಖ್ಯ. ಇದನ್ನು ಚಾಚೂತಪ್ಪದೇ ಅನುಸರಿಸಿದಾಗ ಮಾತ್ರ ನಮ್ಮ ದೇಶ ಸರ್ವ ಜನಾಂಗದ ಶಾಂತಿಯ ತೋಟವಾಗಿ ಹೊರ ಹೊಮ್ಮಲಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನದಂದು ಸಂವಿಧಾನದ ಆಶಯ ಮತ್ತು ಮೂಲ ತತ್ವಗಳನ್ನು ಅರಿತುಕೊಳ್ಳುವ ಪ್ರಯತ್ನಕ್ಕೆ ಎಲ್ಲರೂ ಕೈ ಜೋಡಿಸೋಣ.ಇನ್ನೂ, ಕ್ರೈಸ್ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ರಿಜ್ವಾನ್ ಅರ್ಷದ್ ವಹಿಸಿದ್ದರು. ಪರಿಷತ್ ಸದಸ್ಯರಾದ ಸುದಾಮ್ ದಾಸ್ ಮತ್ತು ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.

# ಸತ್ಯ ಬಾಯಿಟ್ಟ ದರ್ಶನ್

ಮಾಡಿ, ಪ್ರಕರಣದಲ್ಲಿ ತನ್ನ ಹೆಸರು ಎಲ್ಲಿಯೂ ಬರದಂತೆ ಮಾಡಬೇಕು ಎಂದು ಸೂಚಿಸಿ 30 ಲಕ್ಷ ರೂಗಳನ್ನು ನಾನು ನೀಡಿದ್ದೆ ಎಂದಿದ್ದಾರೆ. ಪೊಲೀಸರು, ವಕೀಲರು ಮತ್ತು ಶವ ಸಾಗಿಸುವ ವ್ಯಕ್ತಿಗಳಿಗೆ ತಗಲುವ ವೆಚ್ಚವನ್ನು ಭರಿಸಲು ಪ್ರದೂಶ್‌ಗೆ 30 ಲಕ್ಷ ಹಣ ನೀಡಿರುವುದಾಗಿ ದರ್ಶನ್ ಸ್ವ ಇಚ್ಛೆ ಹೇಳಿಕೆ ನೀಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಆದರೆ ಪಟ್ಟಣಗೆರೆಯ ಶೆಡ್‌ನಲ್ಲಿ ನಡೆದ ಹಲ್ಲೆಯಲ್ಲಿ ತಾನು ಭಾಗಿಯಾಗಿದ್ದೇನೆ ಎಂದು ದರ್ಶನ್ ಒಪ್ಪಿಕೊಂಡಿಲ್ಲ. ಶೆಡ್ ಸುತ್ತಮುತ್ತಲಿನ ಸಿಸಿಟಿವಿ ಕ್ಯಾಮೆರಾಗಳು, ಜೂನ್ 8ರಂದು ರಾತ್ರಿ ದರ್ಶನ್ ತನ್ನ ಜೀಪಿನಲ್ಲಿ ಶೆಡ್ ಕಡೆಗೆ ಆಗಮಿಸಿದ್ದನ್ನು ತೋರಿಸಿವೆ. ಹತ್ಯೆಯ ನಂತರ ದರ್ಶನ್ ಆರೋಪಿಗಳ ಜೊತೆಗೆ ಪಾರ್ಟಿ ಮಾಡಿದ್ದು ಕೂಡ ಪ್ರತ್ಯಕ್ಷದರ್ಶಿಗಳ ಸಾಕ್ಷಿಯಿಂದ ಗೊತ್ತಾಗಿದೆ. ಆದರೆ ಪಟ್ಟಣಗೆರೆಯ ಶೆಡ್‌ನಲ್ಲಿ ಯಾವುದೇ ಸಿಸಿಟಿವಿ ಸಾಕ್ಷಿಗಳನ್ನು ಆರೋಪಿಗಳು ಉಳಿಸಿಲ್ಲ.

**ಮೊಬೈಲ್‌ಗೆ ಶೋಧ:**

ನಟ ದರ್ಶನ್ ಗ್ಯಾಂಗ್‌ನಿಂದ ಕೊಲೆಯಾದ ರೇಣುಕಾಸ್ವಾಮಿ ಹಾಗೂ ಆರೋಪಿ ರಾಘವೇಂದ್ರನ ರಾಜಕಾಲುವೆ ಪಾಲಾಗಿರುವ ಮೊಬೈಲ್‌ಗಳಿಗಾಗಿ ತೀವ್ರ ಹುಡುಕಾಟ ನಡೆಸಲಾಗುತ್ತಿದೆ. ಪ್ರಕರಣದ ಬಗ್ಗೆ ಮಹತ್ವದ ಸಾಕ್ಷಿಗಳನ್ನು ಇದು ಹೊಂದಿದ್ದು, ಇದೀಗ ಶೋಧಕ್ಕಾಗಿ ಅಗ್ನಿಶಾಮಕ ದಳದ ಮೊರೆ ಹೋಗಲಾಗಿದೆ. ಸತತ 11 ದಿನಗಳಿಂದ ಮೃತ ರೇಣುಕಾಸ್ವಾಮಿ ಮೊಬೈಲ್‌ಗಾಗಿ ತೀವ್ರ ಶೋಧ ನಡೆಯುತ್ತಿದೆ, ಜೂ. 8ರಂದು ಕೊಲೆಯಾದ ರೇಣುಕಾಸ್ವಾಮಿ ಹಾಗೂ ಎ5 ಆರೋಪಿ ರಾಘವೇಂದ್ರ ಇಬ್ಬರ ಮೊಬೈಲ್ ಅನ್ನು ಪಡೆದು ಸುಮನಹಳ್ಳಿಯ ರಾಜಕಾಲುವೆ ಬಳಿ ಮತ್ತೊಬ್ಬ ಆರೋಪಿ ಪ್ರದೂಶ್ ಎಸೆದಿದ್ದ.

**ವಿಡಿಯೋ ಚಿತ್ರೀಕರಣ:**

ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾಸ್ವಾಮಿ ಮೇಲೆ ನಡೆಸಲಾದ ಹಲ್ಲೆಯನ್ನು ಈ ಮೊಬೈಲ್‌ಗಳಲ್ಲಿ ಆರೋಪಿಗಳು ವಿಡಿಯೋ ಚಿತ್ರೀಕರಣ ಮಾಡಿಕೊಂಡಿದ್ದರು. ಹೀಗಾಗಿ ಈ ಪ್ರಕರಣದಲ್ಲಿ ರೇಣುಕಾಸ್ವಾಮಿ ಹಾಗೂ ಆರೋಪಿ ರಾಘವೇಂದ್ರರ ಮೊಬೈಲ್‌ಗಳು ಪ್ರಮುಖ ಸಾಕ್ಷಿಯಾಗಿವೆ. ಇಬ್ಬರ ಮೊಬೈಲ್‌ಗಳನ್ನೂ ರಾಜಕಾಲುವೆಗೆ ಬಿಸಾಡಿದ್ದಾಗಿ ಪ್ರದೂಶ್ ಹೇಳಿಕೆ ನೀಡಿದ್ದಾನೆ. ಆತ ತೋರಿಸಿದ ಸುಮನಹಳ್ಳಿ ರಾಜಕಾಲುವೆಯ ಬಳಿ ಪೋಲಿಸ್ ಅಧಿಕಾರಿಗಳು ಮಹಜರು ನಡೆಸಿದ್ದಾರೆ. ಬಿಬಿಎಂಪಿ ಪೌರ ಕಾರ್ಮಿಕರ ಸಹಾಯದಿಂದ ರಾಜಕಾಲುವೆಯಲ್ಲಿ ಮೊಬೈಲ್ ಹುಡುಕಾಡಿಸಿದ್ದಾರೆ. ಆದರೆ ಪತ್ತೆಯಾಗಿಲ್ಲ.

**ಮೊಬೈಲ್‌ಗೆ ಮೊರೆ:**

ಮೊಬೈಲ್ ಪತ್ತೆ ಮಾಡಿಕೊಡುವಂತೆ ಪೊಲೀಸರು ರಾಜಾಜಿನಗರ ಅಗ್ನಿಶಾಮಕ ಠಾಣೆ ಅಧಿಕಾರಿಗಳಿಗೆ ಮೊರೆ ಹೋಗಿದ್ದಾರೆ. ಈ ನಡುವೆ, ಮೊಬೈಲ್ ಅನ್ನು ಬೇರೆ ಕಡೆ ಅವಿತಿರಿಸಿ ಅಥವಾ ನಾಶ ಮಾಡಿ, ಸುಮನಹಳ್ಳಿ ರಾಜಕಾಲುವೆಗೆ ಎಸೆದಿದ್ದೇನೆ ಎಂದು ಪ್ರದೂಶ್ ಹೇಳಿಕೆ ನೀಡಿ ಪೊಲೀಸರ ದಾರಿ ತಪ್ಪಿಸಿರುವ ಸಾಧ್ಯತೆಯೂ ಇದೆ. ಅಥವಾ ಆತ ಬಿಸಾಡಿರುವ ಮೊಬೈಲ್‌ಗಳನ್ನು ಚಿಂದಿ ಆಯುವವರು ತೆಗೆದುಕೊಂಡು ಹೋಗಿರುವ ಸಾಧ್ಯತೆಯೂ ಇದ್ದು, ಈ ದಿಸೆಯಲ್ಲಿ ತನಿಖೆಯನ್ನು ಕೈಗೊಳ್ಳಲಾಗಿದೆ.

## ಕಲಾವಿದರಿಗೆ ಗುರುತಿನ ಚೀಟಿ ಅರ್ಜಿ ಆಹ್ವಾನ

ದಾವಣಗೆರೆ:-

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಿವಿಧ ಕಲಾ ಪ್ರಕಾರಗಳ ಕಲಾವಿದರಿಗೆ ಕಲಾವಿದರ ಗುರುತಿನ ಚೀಟಿಗೆ ಜೂ. 28 ರವರೆಗೆ ಕಾಲಾವಕಾಶ ನೀಡಿ ಅರ್ಜಿ ಆಹ್ವಾನಿಸಲಾಗಿದೆ. ಕಲಾವಿದರು ತಾವು ಕಲಾಪ್ರದರ್ಶನ ನೀಡಿದ ದಾಖಲೆಗಳೊಂದಿಗೆ ನಿಗಧಿತ ಅರ್ಜಿ ನಮೂನೆಯೊಂದಿಗೆ ಇಲಾಖೆಯಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶಕರು ತಿಳಿಸಿದ್ದಾರೆ.

## ಮಗನ ಕೊಂದ ತಂದೆಗೆ ಜೀವಾವಧಿ ಕಾರಾಗೃಹ ಶಿಕ್ಷೆ, ದಂಡ

ಸಿಂಧನೂರು:-

ಸ್ವಂತ ಮಗನನ್ನೇ ಕೊಲೆ ಮಾಡಿದ ತಂದೆಗೆ ಶಿಕ್ಷೆ ಹಾಗೂ ದಂಡವನ್ನು ವಿಧಿಸಿ ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಬಿ.ಬಿ.ಜಕಾತಿ ತೀರ್ಪು ನೀಡಿದ್ದಾರೆ. ಯಲ್ಲಪ್ಪ ತನ್ನ ಪತ್ನಿಯನ್ನು ಕರೆದುಕೊಂಡು ಬರಲು ಆಕೆಯ ತವರೂರಾದ ಎಲೆಕೂಡ್ಲಿಗಿ ಗ್ರಾಮಕ್ಕೆ 2021ರ ಫೆಬ್ರುವರಿ 1ರಂದು ಹೋದಾಗ ನಿರಾಕರಿಸಿದ್ದಾಳೆ. 4 ವರ್ಷದ ಪುತ್ರ ಮಹೇಶನನ್ನು ಅಪಹರಿಸಿಕೊಂಡು ಹೋಗಿ, 2ನೇ ಆರೋಪಿತಳ ಪ್ರಚೋದನೆಯಿಂದ ಅಂದು ಸಂಜೆ 5.30 ಗಂಟೆಗೆ ಪುಟ್ಕಿನಾಳ ಗ್ರಾಮದ ಸವಳು ಹಳ್ಳದ ಹತ್ತಿರ ಪುತ್ರನ ಕತ್ತು ಹಿಸುಕಿ ಕೊಲೆ ಮಾಡಿದ್ದರಿಂದ ಯಲ್ಲಪ್ಪನ ವಿರುದ್ಧ ತುರ್ವಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಈ ಬಗ್ಗೆ ಸರ್ಕಲ್ ಇನ್‌ಸ್ಪೆಕ್ಟರ್ ಚಂದ್ರಶೇಖರ ತನಿಖೆ ಕೈಗೊಂಡು ನ್ಯಾಯಾಲಯಕ್ಕೆ ದೋಷಾರೋಪಣ ಪತ್ರವನ್ನು ಸಲ್ಲಿಸಿದ್ದರು. ಈ ಪ್ರಕರಣದ ವಾದ ಪ್ರತಿವಾದಗಳನ್ನು ಆಲಿಸಿದ ನ್ಯಾಯಾಧೀಶರು ಸಾಕ್ಷ್ಯಾಧಾರಗಳನ್ನು ಪರಾಮರ್ಶಿಸಿ ಮಂಗಳವಾರ 1ನೇ ಆರೋಪಿ ಯಲ್ಲಪ್ಪ ಅಪರಾಧ ಎಸಗಿದ್ದಾರೆಂದು ಪರಿಗಣಿಸಿ ಆತನಿಗೆ ಜೀವಾವಧಿ ಕಾರಾಗೃಹ ಶಿಕ್ಷೆ ಹಾಗೂ 25,000 ದಂಡ ವಿಧಿಸಿ ತೀರ್ಪು ನೀಡಿದ್ದಾರೆ. 2ನೇ ಆರೋಪಿತಳ ವಿರುದ್ಧ ಸಾಕ್ಷ್ಯಾಧಾರಗಳ ಕೊರತೆಯಿಂದ ಅವರನ್ನು ಬಿಡುಗಡೆ ಮಾಡಲಾಗಿದೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಆರ್.ಎ. ಗಡಕರಿ ವಾದ ಮಂಡಿಸಿದ್ದಾರೆ. ಪಿಸಿ ಪಂಪಾಪತಿ ಅವರು ಸಾಕ್ಷಿದಾರರನ್ನು ಸೂಕ್ತ ಸಮಯದಲ್ಲಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ.

## ದರ್ಶನ್ ಬಿಡುಗಡೆಗಾಗಿ ಅಮರೇಶ್ವರನ ಮೊರೆಹೋದ ಅಭಿಮಾನಿಗಳು

ಲಿಂಗಸ್ಗೂರು

ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣ ದಿನೆ ದಿನೆ ಹೊಸ ತಿರುಗುಗಳನ್ನು ಪಡೆಯುತ್ತಿದೆ ಇದರ ಮಧ್ಯೆ, ದರ್ಶನ್ ಬಿಡುಗಡೆಯಾಗಲಿ ಎಂದು ಲಿಂಗಸುಗೂರಿನ ಅಭಿಮಾನಿಗಳು ಇತಿಹಾಸ ಪ್ರಸಿದ್ಧ ಶ್ರೀ ಅಮರೇಶ್ವರನ ಮೊರೆ ಹೋಗಿದ್ದಾರೆ.

ಲಿಂಗಸುಗೂರು ತಾಲ್ಲೂಕಿನ ಪ್ರಸಿದ್ಧ ಅಮರೇಶ್ವರ ದೇವರಲ್ಲಿ ಮೊರೆ ಹೋಗಿದ್ದಾರೆ. ಯರಡೋಣಿ ಗ್ರಾಮದ ಡಿ. ಬಾಸ್ ಸಂಘದ ಅಭಿಮಾನಿಗಳಿಂದ ದರ್ಶನ್ ಫೋಟೊ ಹಿಡಿದು ಅಮರೇಶ್ವರ ದೇವಸ್ಥಾನಕ್ಕೆ ಸುಮಾರು 8 ಕಿ.ಮೀ. ಪಾದಯಾತ್ರೆ ಮೂಲಕ ತೆರಳಿ, ಅಮರೇಶ್ವರನ ಬಳಿ ದರ್ಶನ್ ಫೋಟೋ ತಿಳಿಸಿ ಪೂಜೆ ಮಾಡಿಸಿದ್ದಾರೆ. ಈ ಭಾಗದ ಪರಮಾತ್ಮ ಎಂದು ಶ್ರೀ ಅಮರೇಶ್ವರನನ್ನು ನಾವು ಆರಾಧಿಸುತ್ತೇವೆ. ಆ ದೇವರಲ್ಲಿ ಇಂದು ನಾವು ನಮ್ಮ ನೆಚ್ಚಿನ ನಟ ಆದಷ್ಟು ಬೇಗ ಪ್ರಕರಣದಿಂದ ಮುಕ್ತರಾಗಿ ಹೊರಗೆ ಬರಲಿ ಎಂದು ಬೇಡಿಕೊಳ್ಳಲು ಬಂದಿದ್ದೇವೆ.

ನಮ್ಮ ಬಾಸ್ ದರ್ಶನ್ ತಪ್ಪು ಮಾಡಿದ್ರೆ ಅದಕ್ಕೆ ಕಾನೂನು ಇದೆ, ಸರ್ಕಾರ ಇದೆ, ಅದರ ಪ್ರಕಾರ ಕ್ರಮ ಆಗಲಿ. ತಪ್ಪಿತಸ್ಥರೆಂದು ತೀರ್ಮಾನವಾಗದೇ ಅಭಿಮಾನಿಗಳಿಗೆ, ಅವರಿಗೆ ನೋವು ಮಾಡಬೇಡಿ ಎಂದು ಮನವಿ ಮಾಡಿದರು. ದಯವಿಟ್ಟು ಮನುಷ್ಯತ್ವಕ್ಕೆ ಬೆಲೆ ಕೊಡಿ. ದರ್ಶನ್ ಬಾಸ್ ಯಾರಿಗೂ ನೋವು ಮಾಡುವವರಲ್ಲ. ಪ್ರಾಣಿಗಳನ್ನೇ ಅಷ್ಟೊಂದು ಪ್ರೀತಿಸುವವರು ಅವರು. ಅವರಿಂದ ಎಷ್ಟೋ ಒಳ್ಳೆಯ ಕೆಲಸಗಳಾಗಿವೆ. ಅವರಿಂದ ನಾವೂ ಪ್ರೇರಿತರಾಗಿ ಒಳ್ಳೆಯ ಕೆಲಸ ಮಾಡಬೇಕು ಅನ್ನಿಸಿದೆ. ನಾವು ಯಾವ ಕಾರಣಕ್ಕೂ ಡಿ.ಬಾಸ್ ಅವ್ರನ್ನ ಬಿಟ್ಟುಕೊಡೋದಿಲ್ಲ. ಸಾಯೋವರೆಗೂ ನಾವು ಡಿ.ಬಾಸ್ ಅಭಿಮಾನಿಗಳಾಗಿಯೇ ಇರುತ್ತೇವೆ ಹೆಳಿದ್ದಾರೆ.

## ವಿಶ್ವ ಯೋಗ ದಿನಾಚರಣೆ ಅಂಗವಾಗಿ ಶಿವಯೋಗಿ ಮಂದಿರದಲ್ಲಿ ತರಬೇತಿ



ದಾವಣಗೆರೆ:-

ನಗರದ ಶಿವಯೋಗಿ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಆಯುಷ ಇಲಾಖೆ, ಜಿಲ್ಲಾ ಯೋಗ ಒಕ್ಕೂಟ ಇವರ ಸಹಯೋಗದಲ್ಲಿ 10ನೇ ಅಂತ ರಾಷ್ಟ್ರೀಯ ಯೋಗ ದಿನದ ಪ್ರಯುಕ್ತ ಯೋಗ ತರಬೇತಿ ಶಿಬಿರವನ್ನು ಸಾರ್ವಜನಿಕರಿಗೆ ಉಚಿತವಾಗಿ ಹಮ್ಮಿಕೊಳ್ಳಲಾಗಿತ್ತು.ಶ್ರೀ ಬಸವ ಪ್ರಭು ಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿ ಯೋಗದ ಮಹತ್ವವನ್ನು ತಿಳಿಸಿದರು.ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಆಯುಷ ಅಧಿಕಾರಿಗಳಾದ ಡಾ. ಯೋಗೇಂದ್ರಕುಮಾರ್.ಬಿ ಯು. ಪ್ರಾಸ್ತಾವಿಕವಾಗಿ ಮಾತನಾಡಿ ಆಯುಷ ಪದ್ದತಿಯ ಪ್ರಯೋಜನಗಳು ಹಾಗೂ ಯೋಗದಿಂದಾಗುವ ಪ್ರಯೋಜನಗಳನ್ನು ಸಾರ್ವಜನಿಕರಿಗೆ ತಿಳಿಸಿ ದರು. ಯೋಗ ಒಕ್ಕೂಟದ ಅಧ್ಯಕ್ಷರಾದ ವಾಸುದೇವ ರಾಯ್ಕರ್ ಆಯುಷ್ ಇಲಾಖೆಯ ಜೊತೆಗೂಡಿ ಕಳೆದ 10 ವರ್ಷಗಳಿಂದಲೂ ಅಂತರಾಷ್ಟ್ರೀಯ ಯೋಗದಿನ ಆಚರಿಸುತ್ತಾ ಬಂದಿದ್ದು ಈ ವರ್ಷವೂ ಜೊತೆಗೂಡಿ 10ನೇ ಅಂತರಾಷ್ಟ್ರೀಯ ಯೋಗದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು. ಯೋಗ ಪ್ರಾತ್ಯಕ್ಷಿತೆಯನ್ನು ಯೋಗಪಟು ಚನ್ನಬಸವಣ್ಣ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಸುಮಾರು 600ಕ್ಕೂ ಹೆಚ್ಚು ಸಾರ್ವಜನಿಕರು ಭಾಗವಹಿಸಿದ್ದರು. ಯೋಗ ಒಕ್ಕೂಟದ ಪದಾಧಿಕಾರಿಗಳಾದ ಪರಶುರಾಮ್, ಕೀರ್ತಿರಾಜು, ಪ್ರಕಾಶ್ ವತ್ತಂಗಿ, ಮಾದೇಗೌಡ್ರು, ಅನಿಲ್ ರಾಯ್ಕರ್ ಹಾಗೂ ಇತರರು ಉಪಸ್ಥಿತರಿದ್ದರು.

## ಜೆಡಿಎಸ್ ಪಕ್ಷದಿಂದ 'ಬಂಡಿಯಲ್ಲಿ ಬೈಕ್, ವಿನೂತನ ಪ್ರತಿಭಟನೆ

# ಕೈ ಸರ್ಕಾರದಿಂದ ಜನರ ಜೇಬಿಗೆ ಕತ್ತರಿ: ರಾಜಾ ವೆಂಕಟಪ್ಪ ನಾಯಕ







ಮಾನ್ವಿ:–

ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ಧೋರಣೆ ಖಂಡಿಸಿ ತಾಲೂಕ ಜೆಡಿಎಸ್ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕರ ಸಹಯೋಗದೊಂದಿಗೆ ಕಾರ್ಯಕರ್ತರು ಬಂಡಿಯಲ್ಲಿ ಬೈಕಿ ಇಟ್ಟು ವಿನೂತನವಾಗಿ ಪ್ರತಿಭಟನೆಯ ಮೂಲಕ ತಾಲೂಕ ದಂಡಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಬಸವ ವೃತ್ತದಲ್ಲಿ ಜಮಾಯಿಸಿದ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು, ರಾಜ್ಯ ಸರ್ಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಘೋಷಣೆ ಕೂಗಿದರು. ಕೆಲ ಕಾಲ ಮಾನವ ಸರಪಳಿ ನಿರ್ಮಿಸಿ ರಸ್ತೆ ಸಂಚಾರ ತಡೆದು ಆಕ್ರೋಶ ಹೊರಹಾಕಿದರು. ಸಾರಿಗೆ ಬಸ್‌ಗಳಲ್ಲಿ ಪ್ರಯಾಣಿಸುತ್ತಿದ್ದ ಪ್ರಯಾಣಿಕರು ಹಾಗೂ ವಾಹನ ಸವಾರರಿಗೆ ಹೂ ಕೊಟ್ಟು ಕಿವಿಗೆ ಹೂವಿಟ್ಟ ಸರ್ಕಾರವೆಂದು ಘೋಷಣೆ ಮೊಳಗಿಸಿದರು.

ನಂತರ ಬಸವ ವೃತ್ತದಿಂದ ತಾಲೂಕ ಕಛೇರಿಯವರೆಗೂ ಮೆರವಣಿಗೆ ಮೂಲಕ ಆಗಮಿಸಿದ ಮನವಿ ಪತ್ರ ಸಲ್ಲಿಸಿ ಮಾತಾನಾಡಿದ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಇವರು ನಮ್ಮ ರಾಜ್ಯದಲ್ಲಿ ಹಣಕಾಸು ಪರಿಸ್ಥಿತಿ ಹದಗೆಟ್ಟಿರುವುದಕ್ಕೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ–ಯೇ ಸಾಕ್ಷಿ. ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸುವುದಕ್ಕಾಗಿ ತೈಲ ಬೆಲೆಗಳನ್ನು ಏರಿಕೆ ಮಾಡಿದೆ. ಲೋಕಸಭೆ ಚುನಾವಣೆ ಸೋಲಿನ ಹತಾಶೆ, ಹದಗೆಟ್ಟಿರುವ ಆರ್ಥಿಕ ಪರಿಸ್ಥಿತಿಯಿಂದ ಆಡಳಿತವನ್ನು ಸಮರ್ಥವಾಗಿ ನಿರ್ವಹಣೆ ಮಾಡಲು ಸಾಧ್ಯವಾಗುತ್ತಿಲ್ಲ. ರಾಜ್ಯದ ಆರ್ಥಿಕ ಪರಿಸ್ಥಿತಿ ಸದೃಢವಾಗಿದೆ ಎಂದು ಬಂಡತನದಿಂದ ಮಾತನಾಡುವ ರಾಜ್ಯಸರ್ಕಾರ, ಅಭಿವದ್ಧಿ ಯೋಜನೆಗಳಿಗೆ ಹಣ ನೀಡಲಾಗದಂತಹ ಕಠಿಣ ಪರಿಸ್ಥಿತಿಯನ್ನು ಎದುರಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ದೇಶ ಮತ್ತು ರಾಜ್ಯದಲ್ಲಿ ಕಾಂಗ್ರೆಸ್‌ಗೆ ಹಿನ್ನಡೆಯಾಗಿದೆ. ಆ ಸಿಟ್ಟನ್ನು ಈಗ ಜನರ ಮೇಲೆ ತೋರಿಸುತ್ತಿದ್ದಾರೆ. ಹಿಂದೆ ಸ್ಟ್ಯಾಂಪ್ ಡ್ಯೂಟಿ ಹೆಚ್ಚಿಸಿದ್ದರು. ವಿದ್ಯುತ್ ದರವನ್ನು ಏರಿಸಲಾಗಿದೆ. ಇವರಿಂದ ಉತ್ತಮ ಆಡಳಿತ ನಿರೀಕ್ಷಿಸಲಾಗುವುದಿಲ್ಲ. ತೈಲ ಬೆಲೆ ಏರಿಕೆ ಮೂಲಕ ಕಾಂಗ್ರೆಸ್ ಸರ್ಕಾರ ರಾಜ್ಯದ ಜನತೆಯ ಮೇಲೆ ದರ ಏರಿಕೆಯ ಬರೆ ಹಾಕಿರುವುದು ಖಂಡನೀಯ. ಈಗಾಗಲೇ ವಿದ್ಯುತ್ ದರ, ಬಸ್ ಪ್ರಯಾಣ ದರ, ತರಕಾರಿ–ಬೇಳೆಕಾಳುಗಳ ಬೆಲೆ, ಮದ್ಯದ ಬೆಲೆ, ನಂದಿನಿ ಹಾಲು, ಮೊಸರು, ಮಜ್ಜಿಗೆಯ ಬೆಲೆ ಏರಿಸಿರುವುದು ಸರಿಯಲ್ಲ. ಜನರ ಮೇಲೆ ಹೊರೆ ಹೇರಿರುವುದು ಅಕ್ಷಮ್ಯ ಅಪರಾಧ. ಇನ್ನಾದರೂ ಜನಸಾಮಾನ್ಯರ ವಿರೋಧಿ ಧೋರಣೆ ಬಿಟ್ಟು ಕೂಡಲೇ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ನಿರ್ಧಾರ ಹಿಂಪಡೆಯಬೇಕು ಎಂದು ಒತ್ತಾಯಿಸಿದರು.




ನಂತರ ನಮ್ಮ ಜಿಲ್ಲೆಯಿಂದ ರಾಜ್ಯ ಸರ್ಕಾರದ ಸಚಿವರಾಗಿರುವವರು ಇದರ ಕುರಿತು ಸರ್ಕಾರದ ಜೊತೆ–ಗೆ ಮಾತಾನಾಡಿಬೇಕು ಇಲ್ಲವಾದಲ್ಲಿ ಕೂಡಲೇ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಒತ್ತಾಯಿಸಿತು.

ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ, ರಾಜಾ ಮಹೇಂದ್ರ ನಾಯಕ, ರಾಜಾ ರಾಮಚಂದ್ರ ನಾಯಕ,

ಜೆ ಎಚ್ ದೇವರಾಜ, ಪಿ ರವಿಕುಮಾರ, ರಾಜಾ ಆದರ್ಶ ನಾಯಕ, ಪುರಸಭೆ ಸದಸ್ಯರಾದ ಹನುಮಂತ ಬೋವಿ, ಶರಣಪ್ಪ ಮೇದಾ, ಮಹಾದೇವಪ್ಪ, ಶಿವರಾಜ ನಾಯಕ, ನಾಗರಾಜ ಬೋಗವತಿ, ಸುಬಾನ್ ಬೇಗ್, ಎಸ್ ಯಂಕೋಬ, ಮೌನೇಶ ಹರಟೆನೂರ ,ಮೌನೇಶನಾಯಕ,ಮಹಿಳಾ ಘಟಕದ ಅಧ್ಯಕ್ಷರು ಸೇರಿದಂತೆ ನೂರಾರು ಜೆಡಿಎಸ್ ಕಾರ್ಯಕರ್ತರು ಇದ್ದರು.

---

## ಹಸಿವು ಅಳು ನಗು ಮೊದಲಿನಾ ಅನುಭವ

ತಾಯ ಗರ್ಭದಿಂದುದಯಿಸಿದ ಕ್ಷಣದಿಂದ,
ಕರುಳು ಬಳ್ಳಿ ಕತ್ತರಿಸಿದ ಘಳಿಗೆಯಿಂದ,
ಅಂತರಂಗದ ಅರಿವಿನೊಂದಿಗೆ ಬೆಳೆಯತೊಡಗಿದೆ.....
ಹಸಿವು ಅಳು ನಗು ಮೊದಲಿನಾ ಅನುಭವಗಳು,
ತಾಯ ಅಪ್ಪುಗೆ, ತಂದೆಯ ಧ್ವನಿ ಗ್ರಹಿಸತೊಡಗಿದೆ,
ಮತ್ತಷ್ಟು ಚಲಿಸುವ ಆಕೃತಿಗಳನ್ನು ಕಂಡೆ,
ಅಕ್ಕ ಅಣ್ಣ ಅಜ್ಜ ಅಜ್ಜಿ ಎಂದರಿವಾಗತೊಡಗಿತು,
ಹಸು ಕರು ಕುರಿ ಕೋಳಿ ನಾಯಿ ಬೆಕ್ಕು ನನ್ನವೆಂದೇ ಭಾವಿಸಿದೆ,
ಅಮ್ಮಾ...ಅಪ್ಪಾ...ಅಜ್ಜೀ...
ತಾತಾ....ಅಣ್ಣಾ..ಅಕ್ಕಾ...
ಎಂದು ತೊದಲತೊಡಗಿದೆ,
ಹಾಲು ಅನ್ನ ಸಿಹಿ ಕಹಿ ಖಾರ ಒಗರು ರುಚಿಸತೊಡಗಿತು,
ಅ ಆ ಇ ಈ ಂ ಃ ಅ ಆ 1 2 3 4 ಅರ್ಥಮಾಡಿಕೊಳ್ಳತೊಡಗಿದೆ,
ಕಪ್ಪು ಬಿಳಿ ನೀಲಿ ಹಸಿರು ಕೆಂಪು ಗುರುತಿಸತೊಡಗಿದೆ,
ಟೀಚರು ಆಯಾ ಡಾಕ್ಟರು ಗೊತ್ತಾಗತೆ–ೂಡಗಿದರು,
ಬೆಳಕು ನೀರು ಗಿಡ ಮರ ಹೂವು ನನ್ನೊಳಗಿಳಿಯತೊಡಗಿತು,
ಚಳಿ ಗಾಳಿ ಮಳೆ ಬಿಸಿಲು ತಿಳಿಯತೊಡಗಿತು,
ಸೈಕಲ್ಲು ಬೈಕು ಕಾರು ಬಸ್ಸು ರೈಲು ವಿಮಾನ ಆಶ್ಚರ್ಯವನ್ನುಂಟುಮಾಡತೊಡಗಿತು,
ರೇಡಿಯೋ ಟಿವಿ ಕಂಪ್ಯೂಟರು ಮೊಬೈಲುಗಳು ಕುತೂಹಲಕೆರಳಿಸತೊಡಗಿದವು,
ಕೋಪ ಅಸೂಯೆ ಭಯ ಕರುಣೆ ಪ್ರತಿ–ಕ್ಷಣದ ಭಾವನೆಯಾಗತೊಡಗಿತು,
ಗಂಡು ಹೆಣ್ಣಿನ ವ್ಯತ್ಯಾಸ ಅಂತರ್ಗತವಾಗತೊಡಗಿತು,
ಕನ್ನಡ ಇಂಗ್ಲೀಷ್ ಹಿಂದಿ ತೆಲುಗು ತಮಿಳು ಮಲಯಾಳಂ ಭಾಷೆಗಳ ಭಿನ್ನತೆಯೂ ಸ್ಪಷ್ಟವಾಗತೊಡಗಿತು,
ಗೆಳೆಯ ಗೆಳತಿಯರು, ಓದು ಆಟ ನೃತ್ಯ ಸಂಗೀತ ಖುಷಿಕೊಡತೊಡಗಿತು,
ಆಸ್ಪತ್ರೆ ಬ್ಯಾಂಕು ಅಂಗಡಿ ಹೋಟೆಲು ಸಿನಿಮಾ ಮಂದಿರ ಗಮನಕ್ಕೆ
ಬರತೊಡಗಿತು,
ನನ್ನೂರು – ಬೆಂಗಳೂರು, ಕರ್ನಾಟಕ ಭಾರತ ಏಷ್ಯಾ ವಿಶ್ವ ಹತ್ತಿರ ಬಂದಂತಾಗತೆ–ೂಡಗಿತು,
ಕಣ್ಣು ಕಿವಿ ಮೂಗು ಬಾಯಿ ಅದು ಇದು ಅಂಗಗಳ ಬೇಕು ಬೇಡಗಳು ಅನುಭವವಾಗತೊಡಗಿದವು,
ತತ್ವ ಸಿದ್ಧಾಂತ ಮೌಲ್ಯ ಕೆಚ್ಚು ಹೋರಾಟ ಗಲಾಟೆ ಪ್ರಚಾರ ಮಹತ್ವಪಡೆಯತೊಡಗಿತು,
ಪ್ರೀತಿಯ ಭಾವ ಚಿಗುರತೊಡಗಿತು,
ಸಂಗಾತಿಯ ಸಾಮಿಪ್ಯಕ್ಕೆ ಮನಸ್ಸು ಜಾರತೆ–ೂಡಗಿತು,
ಉದ್ಯೋಗ ಜವಾಬ್ದಾರಿ ಭವಿಷ್ಯ ಕಾಡತೊಡಗಿತು,
ಹಣ ಅಂತಸ್ತು ಅಧಿಕಾರ ಐಶ್ವರ್ಯಗಳ ಮೋಹ ಉಂಟಾಗತೊಡಗಿತು,
ನಾನು ನನ್ನದು ನನ್ನವರೆಂಬ ಕುಟುಂಬ ಬೇಕೆನಿಸತೊಡಗಿತು,
ಕಾಮ ಕ್ರೋದ ಲೋಭ ಮೋಹ ಮದ ಮತ್ಸರಗಳ ಸಮ್ಮಿಳಿತವಾಗತೊಡಗಿತು,
ವಂಶಾಭಿವೃದ್ಧಿಯೇ ಒಂದು ಘನಕಾರ್ಯವೆಂದು ಭಾಸವಾಗತೊಡಗಿತು,
ಮಗ ಮಗಳ ಶಿಕ್ಷಣ ಭವಿಷ್ಯ ಸುಖಸಂತೋಷ ಉದ್ಯೋಗವೇ ಬದುಕಿನ ಧ್ಯೇಯವೆಂದೆನಿಸತೊಡಗಿತು,
ಮಗಳಿಗೊಂದು ಮದುವೆ ಮಗನಿಗೊಂದು ಮದುವೆಯೇ ಪ್ರಾಮುಖ್ಯತೆ ಪಡೆಯುವಂತಾಯಿತು,
ಮಗಳು ಅಮೆರಿಕಾ, ಮಗ ಆಸ್ಟ್ರೇಲಿಯಾ ಪಾಲಾದರು,
ರಕ್ತ ಸಂಬಂಧಿಗಳು, ಬಂಧುಬಳಗದವರು, ಸ್ನೇಹಿತರು ಇದ್ದರು, ಎಲ್ಲವೂ ದೂರವಾದಂತೆನಿಸತೊಡಗಿತು,
ಮತ್ತೆ ತಾಯ ಗರ್ಭದಿಂದ ಹೊರಬಂದಾಗ, ಕರುಳು ಕತ್ತರಿಸಿದಾಗ ಮೂಡಿದ ಅನಾಥಭಾವ ಆವರಿಸಿಕೊಳ್ಳತೊಡಗಿತು,
ಸಾವಿನ ಭಯ ಕಾಡತೊಡಗಿತು,
ಪುನಃ ತಾಯ ಗರ್ಭ ಸೇರುವ ಮನಸ್ಸಾಯಿತು......
ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ.


–ವಿವೇಕಾನಂದ. ಎಚ್. ಕೆ.
9844013068.........

---

## ಕಾಯಿಪಲ್ಲೆ ವ್ಯಾಪಾರಸ್ಥಳ ಮಗ ನಾಗರಾಜ ಕೂಲಿಗೋಡ ಶಾಲೆಗೆ ಪ್ರಥಮ

ಮೂಡಲಗಿ:–

ತಾಲೂಕಿನ ಹಳ್ಳೂರ ಸ್ಥಳೀಯ ಬ. ಕು.ಮ. ಪ್ರೌಢ ಶಾಲೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಯಾದ ನಾಗರಾಜ ಬಸಪ್ಪ ಕೂಲಿಗೋಡ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ 95.04% , 594 ಅಂಕಗಳನ್ನು ಪಡೆದು ಉನ್ನತ ಶ್ರೇಣಿಯಲ್ಲಿ ಉತ್ತೀರ್ಣನಾಗಿದ್ದಾನೆ. ಆಂಗ್ಲ ಭಾಷೆಯಲ್ಲಿ 100 ಕ್ಕ 100 ಅಂಕ ಪಡೆದು ದಾಖಲೆ ಮಾಡಿದ್ದಾನೆ.ತಾಲ್ಲೂಕಿಗೆ,ಗ್ರಾಮಕ್ಕೆ ಶಾಲೆಗೆ ಕೀರ್ತಿಯನ್ನು ಹೆಚ್ಚಿಸಿದ್ದಾನೆ.ಗ್ರಾಮದ 1 ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಶಾಲೆಯಲ್ಲಿ ಕಲಿತು ಬಡ ಕುಟುಂಬದಲ್ಲಿ ಜನಿಸಿ ಕಾಯಿಪಲ್ಲೆ ಮಾಡುತ್ತಿರುವ ತಾಯಿ ಯಮನವ್ವ ಕೂಲಿ ಮಾಡುತ್ತಿರುವ ತಂದೆ ಬಸಪ್ಪ ಅವರ ಬಡತನ ಕುಟುಂಬದಲ್ಲಿ ಸಾಧನೆ ಮಾಡಿದ್ದೂ ಸಾಧನೆಗೆ ಬಡತನ ಅಡ್ಡಿಯಲ್ಲ ಅನ್ನುವುದಕ್ಕೆ ಸಾಕ್ಷಿಯಾಗಿದೆ.ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ್ದಕ್ಕೆ ಶಾಲೆಯ ಶಿಕ್ಷಕರು ತಂದೆ ತಾಯಿ, ಶಿಕ್ಷಣ ಪ್ರೇಮಿಗಳು ಅಭಿನಂದನೆಗಳನ್ನು ಸಲ್ಲಿಸಿದರು.



---

## ಸಿಂಧನೂರು: ಕೆಳಭಾಗಕ್ಕೆ ನೀರು ಹರಿಸಲು ಒತ್ತಾಯ

ಸಿಂಧನೂರು:–

ಎಲ್ಲ ವಿತರಣಾ ಕಾಲುವೆಗಳಿಗೆ ಡಿಸೈನ್ ಪ್ರಕಾರ ಪೈಪ್‌ಗಳನ್ನು ಅಳವಡಿಸಿ, ಕೆಳಭಾಗದ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ಹರಿಸಬೇಕೆಂದು ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘ ತಾಲ್ಲೂಕು ಘಟಕ ಮಂಗಳವಾರ ನಗರದ ಪಿಡಬ್ಲ್ಯುಡಿ ಕ್ಯಾಂಪಿನಲ್ಲಿರುವ ನೀರಾವರಿ ಇಲಾಖೆಯ ಉಪ ವಿಭಾಗದ ಕಚೇರಿಯ ಎದುರು ಧರಣಿ ನಡೆಸಿತು.

'46ನೇ ವಿತರಣಾ ಕಾಲುವೆ ವ್ಯಾಪ್ತಿಯ ಚಿರತನಾಳ ಗ್ರಾಮ ಟೆಲೆಂಡ್‌ಗೆ ಒಳಪಟ್ಟಿದ್ದು, ವಿತರಣಾ ಕಾಲುವೆಯ ಒಳಭಾಗದ 17 ಹಂಚಿಕೆ ಪೈಪುಗಳು ಡಿಸೈನ್ ಮತ್ತು ನಕ್ಷೆ ಪ್ರಕಾರ ಇಲ್ಲ. ಟೆಲೆಂಡ್‌ಗೆ ಗೇಜ್ ಅಳವಡಿಸದೆ ಇರುವುದರಿಂದ ಗ್ರಾಮದ ರೈತರಿಗೆ ನೀರು ಸಿಗುತ್ತಿಲ್ಲ' ಎಂದು ಸಂಘದ ಜಿಲ್ಲಾ ಘಟಕದ ಉಪಾಧ್ಯಕ್ಷ ಬಸವಂತರಾಯಗೌಡ ಕಲ್ಲೂರು ದೂರಿದರು.

'ವಿತರಣಾ ಕಾಲುವೆ 54ರ 3ಆರ್ ಒಳಭಾಗದಲ್ಲಿ ಸುಮಾರು 14 ಪೈಪ್‌ಗಳು ಡಿಸೈನ್ ಪ್ರಕಾರ ಇಲ್ಲ.



ಟ್ರ್ಯಾಕ್ಟರ್, ಆಯಿಲ್ ಎಂಜಿನ್, ಸೈಫಾನ್ ಪೈಪ್ ಮುಖಾಂತರ ಅನಧಿಕೃತವಾಗಿ ಕಾಲುವೆ ನೀರು ಬಳಸಿಕೊಳ್ಳಲಾಗುತ್ತಿದೆ.

ಮುಖ್ಯ ಕಾಲುವೆ 119ನೇ ಸಲಹಾ ಸಮಿತಿಯಲ್ಲಿ ಹೇಳಿರುವ ಆನ್–ಆಫ್ ಪದ್ಧತಿಯನ್ನು ರೈತರು ಒಪ್ಪುವುದಿಲ್ಲ. ಪ್ರಭಾವಿ ರಾಜಕಾರಣಿಗಳು ಮುಖ್ಯ ಕಾಲುವೆಯಿಂದ ಎಡಭಾಗದಲ್ಲಿ ಅಕ್ರಮ ನೀರಾವರಿ ಮಾಡಿಕೊಂಡಿದ್ದು, ಇದನ್ನು ತಡೆಗಟ್ಟಲು ಸೂಕ್ತ ಕ್ರಮಕೈಗೊಳ್ಳಬೇಕು' ಎಂದು ಆಗ್ರಹಿಸಿದರು.

'ಮಲ್ಲಾಪೂರ ಹಾಗೂ ದೇವರಗುಡಿ ಗ್ರಾಮದ 2 ಸಾವಿರ ಎಕ–ರೆ ನೀರಾವರಿಗಾಗಿ ದೇವರಗುಡಿ ಪಿಕ್‌ಅಪ್ ಯೋಜನೆ ಮಾಡಲಾಗಿದೆ. ಹಿಂದಿನ ಗುತ್ತಿಗೆದಾರರು ಪೈಪ್‌ಗಳ ಮಧ್ಯ ರಿಂಗ್ ಜೋಡಿಸಿಲ್ಲ. ನೀರು ಲಿಕೇಜ್ ಆಗುತ್ತಿರುವುದರಿಂದ ಈ ಯೋಜನೆ ನಿಂತು ಹೋಗಿದೆ. ಕೂಡಲೇ ನೀರು ಲಿಕೇಜ್ ಬಂದ್ ಮಾಡಿ ದೇವರಗುಡಿ ಪಿಕ್‌ಅಪ್‌ಗೆ ಮರುಜೀವ ನೀಡಬೇಕು' ಎಂದು ಒತ್ತಾಯಿಸಿದರು.

'ಬೂತಲದಿನ್ನಿ ಗ್ರಾಮದ ಸೀಮೆಯಲ್ಲಿ ಬರುವ 7ಆರ್ ಕಾಲುವೆಯನ್ನು ಸ್ವಚ್ಛಗೊಳಿಸಿ, ದುರಸ್ತಿ ಮಾಡಬೇಕು. ಕಳೆದ ವರ್ಷ ರೈತರು ತಮ್ಮ ಸ್ವ–ಂತ ಹಣಕಾಸಿನ ನೆರವಿನಿಂದ 40 ಸಾವಿರ ಖರ್ಚು ಮಾಡಿ ಕಾಲುವೆ ಸ್ವಚ್ಛ ಮಾಡಿದ್ದು, ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ, ಶಾಸಕರಿಗೆ ಮಾಹಿತಿ ನೀಡಲಾಗಿತ್ತು. ರೈತರು ಖರ್ಚು ಮಾಡಿದ ಹಣವನ್ನು ಹಿಂದಿರುಗಿಸುವುದಾಗಿ ತಿಳಿಸಿದರು. ಆದರೆ ಇಲ್ಲಿಯವರೆಗೆ ಮರುಪಾವತಿ ಮಾಡಿಲ್ಲ' ಎಂದರು.

ಧರಣಿ ಸ್ಥಳಕ್ಕೆ ಬಂದ ಮಸ್ಕಿ ಉಪವಿಭಾಗದ ಎಇಇ ದಾವಲಸಾಬ, ತುರ್ವಿಹಾಳ ಉವಿಭಾಗದ ಎಇಇ ಹನುಮಂತಪ್ಪ, ಸಿಂಧನೂರು ಉಪವಿಭಾಗದ ಅಧೀಕ್ಷಕ ಶಿವಕುಮಾರ ಹಾಗೂ ತಾ.ಪಂ ಎಡಿಎಸ್‌ಆರ್ ಆಲಂಬಾಷಾ ಅವರು ಮನವಿ ಪತ್ರ ಸ್ವೀಕರಿಸಿ ಕೆಲಕಾಲ ಚರ್ಚಿಸಿದರು.

ತಾಲ್ಲೂಕು ಘಟಕದ ಅಧ್ಯಕ್ಷ ಎಚ್.ವಿರೂಪಾಕ್ಷಿಗೌಡ ಕಲ್ಲೂರು, ಕಾರ್ಯದರ್ಶಿ ಶ್ರೀನಿವಾಸರೆಡ್ಡಿ ಮಾವಿನಮಡ್ಡು, ನಾಗೇಶಗೌಡ ಕಲ್ಲೂರು, ಬಾವಿಕಟ್ಟಿ ಯಂ–ಕೋಬ, ನಾಗಪ್ಪ ಹಂಚಿನಾಳ, ಜಗನ್ನಾತರೆಡ್ಡಿ, ವೀರೇಶ ಪಾಟೀಲ ಚಿರತನಾಳ, ಶರಣಪ್ಪ ಚಿರತನಾಳ, ಗೋನಪ್ಪ ದೇವರಗುಡಿ, ಮಲ್ಲಿಕಾರ್ಜುನ ಮುಳ್ಳೂರು, ಬಸವರಾಜ ಮಾಲಿಪಾಟೀಲ, ಎಂ.ಗೋಪಾಲಕೃಷ್ಣ, ಶರಭಣ್ಣ ನಾಗಾಲಾಪೂರ, ಯಂಕಪ್ಪ ಕೆಂಗಲ್ ಪಾಲ್ಗೊಂಡಿದ್ದರು.

---

# ಕೂಡ್ಲಿಗಿ ತಾ.ಪಂ ಸಾಮಾನ್ಯ ಸಭೆ

ಕೂಡ್ಲಿಗಿ:–

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಆಡಳಿತಾಧಿಕಾರಿ ಹಾಗೂ ಬಳ್ಳಾರಿ ಡಿಸಿಎಫ್ ಜೆ.ಜೆ.ರವಿ ಅಧ್ಯಕ್ಷತೆಯಲ್ಲಿ ಶನಿವಾರ ಸಾಮಾನ್ಯ ಸಭೆ ನಡೆಸಿ, ತಾಲೂಕು ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಲಾಯಿತು.

ತಾಪಂ ಆಡಳಿತಾಧಿಕಾರಿ ಜೆ.ಜೆ. ರವಿ ಅವರು ರೈತರಿಗೆ ಸಂಬಂಧಿಸಿದ ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನು ಕುರಿತು ಸಹಾಯಕ ಕೃಷಿ ನಿರ್ದೇಶಕ ಎಂ.ಟಿ.ಸುನಿಲ್ ಅವರನ್ನು ಕೇಳಿದರು. ಅದಕ್ಕೆ ಕೃಷಿ ಅಧಿಕಾರಿ ಸುನಿಲ್ ಕುಮಾರ್, ಮುಂಗಾರಿಗೂ ಮುನ್ನ ಸೇರಿ ಈವರೆಗೆ ತಾಲೂಕಿನಲ್ಲಿ ಉತ್ತಮ ಮಳೆಯಾಗಿದ್ದು, ಈಗಾಗಲೇ ಜೋಳ, ತೊಗರಿ ಸೇರಿ ನಾನಾ ಬೀಜಗಳನ್ನು ರೈತರು ಬಿತ್ತನೆ ಮಾಡಿದ್ದಾರೆ. ತಾಲೂಕಿನ ಕಾನಹೊಸಹಳ್ಳಿ, ಗುಡೇಕೋಟೆ, ಕೂಡ್ಲಿಗಿಯಲ್ಲಿರುವ ರೈತ ಸಂಪರ್ಕ ಕೇಂದ್ರಗಳಲ್ಲಿ ಶೇಂಗಾ ಬಿತ್ತನೆ ಬೀಜ ವಿತರಿಸಲಾಗುತ್ತಿದೆ. ಯಾವುದೇ ಕಾರಣ–



ಕ್ಕೂ ರೈತರಿಗೆ ಬಿತ್ತನೆ ಬೀಜದ ಕೊರತೆ–ಯಾಗದಂತೆ ಕ್ರಮಕೈಗೊಳ್ಳಲಾಗಿದೆ ಎಂದು ಉತ್ತರಿಸಿದರು. ರಸಗೊಬ್ಬರ ಮಾರಾಟಗಾರರು ಹೆಚ್ಚಿನ ಬೆಲೆಗೆ ಬೀಜ, ಗೊಬ್ಬರ ಮಾರಾಟ ಮಾಡಿದರೆ ಕ್ರಮಕೈಗೊಳ್ಳುವಂತೆ ಸಹಾಯಕ ಕೃಷಿ ನಿರ್ದೇಶಕರಿಗೆ ತಾಪಂ ಆಡಳಿತಾಧಿಕಾರಿ ಸೂಚಿಸಿದರಲ್ಲದೆ, ತೋಟಗಾರಿ–ಕೆ ಬೆಳೆಗಳು ಹಾಗೂ ಮಳೆಯಿಂದ ಹಾನಿಯಾದ ಬೆಳೆಗಳ ಕುರಿತು ವರದಿ ನೀಡುವಂತೆ ತೋಟಗಾರಿಕೆ ಇಲಾಖೆ ಅಧಿಕಾರಿಗೆ ತಿಳಿಸಿದರು.

ತಾಲೂಕಿನ ಸರಕಾರಿ ಶಾಲೆಯ ಕೊಠಡಿಗಳ ಸ್ಥಿತಿಗತಿ ಕುರಿತು ಬಿಇಒ ಪದ್ಮನಾಭ ಕರಣಂ ಮಾಹಿತಿ ನೀಡಿದರು. ತಾಲೂಕಿನ ನಾನಾ ಗ್ರಾಪಂ ವ್ಯಾಪ್ತಿಯಲ್ಲಿ ಜಲಜೀವನ್ ಮಿಷನ್ ಕಾಮಗಾರಿ ಅರೆಬರೆಯಾಗಿದೆ ಎಂದು ಕೆಲ ಪಿಡಿಒಗಳು ತಾಪಂ ಆಡಳಿತಾಧಿಕಾರಿ ಗಮನಸೆಳೆದರು. ಆಗ, ಗ್ರಾಮೀಣ ಕುಡಿವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಪ್ರಸನ್ನ ಅವರು ಮಾತನಾಡಿ, ಜೆಜೆಎಂ ಕಾಮಗಾರಿ ಪೂರ್ಣಗೊಂಡ ನಂತರ ಸ್ಥಳ ಪರಿಶೀಲನೆ ಮಾಡುವುದರ ಜತೆ–ಗೆ ಕಾಮಗಾರಿಯ ಗುಣಮಟ್ಟವನ್ನು ಪರೀಕ್ಷಿಸಿದ ನಂತರವೇ ಗ್ರಾಪಂಗೆ ಹಸ್ತಾಂತರ ಮಾಡಿಕೊಳ್ಳಿ. ಯಾವುದೇ ಕಾರಣಕ್ಕೂ ಅರೆಬರೆ ಕಾಮಗಾರಿ ಮಾಡಿ ಹಸ್ತಾಂತರ ಮಾಡಿಕೊಳ್ಳಲು ಯಾರಾದರೂ ಗ್ರಾಪಂಗೆ ಸೂಚಿಸಿದರೆ ಇಲಾಖೆಗೆ ಮಾಹಿತಿ ನೀಡಿ ಎಂದು ತಿಳಿಸಿದರು.

ತಾಪಂ ಇಒ ವೈ.ರವಿಕುಮಾರ್ ಮಾತನಾಡಿ, ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ತಾಲೂಕಿನ ಎಲ್ಲಾ ಗ್ರಾಪಂಗಳಲ್ಲಿ ಕಾರ್ಮಿಕರಿಗೆ ಉದ್ಯೋಗ ನೀಡಲಾಗಿದೆ. ಈಗಾಗಲೇ ಕಾಮಗಾರಿ ಮಾಡಿರುವ ಜಮೀನುಗಳ ಬದುವುಗಳು ಸೇರಿ ಚೆಕ್‌ಡ್ಯಾಂಗಳಲ್ಲಿ ಮಳೆ ನೀರು ತುಂಬಿರುವುದು ರೈತರಿಗೆ ಅನುಕೂಲವಾಗಿದೆ ಎಂದು ತಿಳಿಸಿದರು. ರೇಷ್ಮೆ, ಬಿಸಿಎಂ, ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಜೆಸ್ಕಾಂ, ಆರೋಗ್ಯ ಸೇರಿ ನಾನಾ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಲಾಯಿತು. ಈ ಸಂದರ್ಭದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾಪಂ ಪಿಡಿಒಗಳು, ತಾಪಂ ಸಿಬ್ಬಂದಿ ಇದ್ದರು.

Editor:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Publisher:S.K.Wadeyar, #69 "VISPATHI", B,Block S.O.G. Colony Davanagere-577005,Karnataka.
Printer:S.K.Wadeyar, SUCHITHRA PRINTERs & PUBLISHERs # 69 "VISPATHI",B,Block S.O.G.Colony Davanagere-577005,Karnataka
Owner:S.K.Wadeyar, #69 "VISPATHI", B,Block S.O.G.Colony, Davanagere-577005,Karnataka